ಸೋಮವಾರ
18 ಮೇ, 2026
ಸಂಪುಟ 01 । ಸಂಚಿಕೆ 193
04 ಪುಟಗಳು । ಬೆಲೆ 5.00 ರೂ
Mob: 9538786812
Office: 9480847498
PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ



ಸಂಪಾದಕರು
ಅಭಿಷೇಕ್ ಡಿ.ಆರ್

## ಜನಸಂಖ್ಯೆ ಹೆಚ್ಚಳಕ್ಕೆ ಆಂಧ್ರ ಸರ್ಕಾರದಿಂದ ಭರ್ಜರಿ ಪ್ರೋತ್ಸಾಹಧನ

### ಯುವಜನರ ಕೊರತೆ ಭೀತಿ । 3ನೇ ಮಗುವಿಗೆ ರೂ.30,000, 4ನೇ ಮಗುವಿಗೆ ರೂ.40000 ಘೋಷಿಸಿದ ಚಂದ್ರಬಾಬು ನಾಯ್ಡು


**ಅಮರಾವತಿ:** ಆಂಧ್ರಪ್ರದೇಶದಲ್ಲಿ ಇಳಿಮುಖವಾಗುತ್ತಿರುವ ಜನನ ಪ್ರಮಾಣದ ಬಗ್ಗೆ ಆತಂಕ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು, ಜನಸಂಖ್ಯೆ ಹೆಚ್ಚಳಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಮಹತ್ವದ ಘೋಷಣೆ ಮಾಡಿದ್ದಾರೆ. ಮೂರನೇ ಮಗುವಿಗೆ 30,000 ಹಾಗೂ ನಾಲ್ಕನೇ ಮಗುವಿಗೆ 40,000 ಪ್ರೋತ್ಸಾಹಧನ ನೀಡಲಾಗುವುದು ಎಂದು ಘೋಷಿಸಿರುವ ಅವರು, ರಾಜ್ಯದಲ್ಲಿ ಕುಟುಂಬ ವೃದ್ಧಿಗೆ ಉತ್ತೇಜನ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ.

ಶ್ರೀಕಾಕುಳಂ ಜಿಲ್ಲೆಯ ನರಸನ್ನಪೇಟೆಯಲ್ಲಿ ನಡೆದ ಸಾರ್ವಜನಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ಭವಿಷ್ಯದಲ್ಲಿ ಯುವಜನರ ಕೊರತೆ ದೇಶದ ಆರ್ಥಿಕತೆಗೆ ದೊಡ್ಡ ಸವಾಲಾಗಬಹುದು ಎಂದು ಎಚ್ಚರಿಸಿದರು. "ಒಂದು ಕಾಲದಲ್ಲಿ ಜನಸಂಖ್ಯೆ ಹೆಚ್ಚಳವೇ ಸಮಸ್ಯೆ ಎಂದು ಭಾವಿಸಲಾಗುತ್ತಿತ್ತು. ಆದರೆ ಈಗ ಪರಿಸ್ಥಿತಿ ಬದಲಾಗಿದೆ. ಅನೇಕ ರಾಜ್ಯಗಳಲ್ಲಿ ಜನನ ಪ್ರಮಾಣ ಕುಸಿಯುತ್ತಿದೆ. ಭವಿಷ್ಯದಲ್ಲಿ ಕೆಲಸ ಮಾಡುವ ಯುವಜನರ ಸಂಖ್ಯೆ ಕಡಿಮೆಯಾದರೆ ಆರ್ಥಿಕ ವ್ಯವಸ್ಥೆಯ ಮೇಲೆ ಗಂಭೀರ ಪರಿಣಾಮ ಬೀಳಬಹುದು" ಎಂದು ಹೇಳಿದರು.

ಜನಸಂಖ್ಯೆ ಕುಸಿತದ ಸಮಸ್ಯೆ ಈಗಾಗಲೇ ಜಪಾನ್, ದಕ್ಷಿಣ ಕೊರಿಯಾ, ಚೀನಾ ಸೇರಿದಂತೆ ಅನೇಕ ದೇಶಗಳಲ್ಲಿ ಕಂಡುಬರುತ್ತಿದೆ ಎಂದು ಉದಾಹರಣೆ ನೀಡಿದ ಅವರು, ಭಾರತವೂ ಮುಂದಿನ ದಿನಗಳಲ್ಲಿ ಇದೇ ರೀತಿಯ ಸವಾಲು ಎದುರಿಸಬಹುದೆಂದು ಅಭಿಪ್ರಾಯಪಟ್ಟರು. ವಿಶೇಷವಾಗಿ ದಕ್ಷಿಣ ಭಾರತದ ರಾಜ್ಯಗಳಲ್ಲಿ ಜನನ ಪ್ರಮಾಣ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಕುಟುಂಬ ವೃದ್ಧಿಗೆ ಉತ್ತೇಜನ ನೀಡಲು ರಾಜ್ಯ ಸರ್ಕಾರ ಹೊಸ ಯೋಜನೆ ರೂಪಿಸುತ್ತಿದೆ. ಅದರ ಭಾಗವಾಗಿ ಮೂರನೇ ಮಗುವಿಗೆ 30,000 ಮತ್ತು ನಾಲ್ಕನೇ ಮಗುವಿಗೆ 40,000 ಪ್ರೋತ್ಸಾಹಧನ ನೀಡುವ ಯೋಜನೆಯನ್ನು ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದರು. ಈ ಯೋಜನೆಯ ಸಂಪೂರ್ಣ ಮಾರ್ಗಸೂಚಿಯನ್ನು ಮುಂದಿನ ಒಂದು ತಿಂಗಳೊಳಗೆ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ.

"ಮಕ್ಕಳು ಸಮಾಜಕ್ಕೆ ಭಾರವಲ್ಲ. ಅವರು ದೇಶದ ಭವಿಷ್ಯದ ಸಂಪತ್ತು. ಯುವಜನರೇ ದೇಶದ ಶಕ್ತಿ. ಭವಿಷ್ಯದ ಆರ್ಥಿಕತೆ, ಉದ್ಯಮ, ಕೃಷಿ ಮತ್ತು ಅಭಿವೃದ್ಧಿಗೆ ಯುವ ಜನಸಂಖ್ಯೆ ಅತ್ಯಗತ್ಯ" ಎಂದು ಚಂದ್ರಬಾಬು ನಾಯ್ಡು ಹೇಳಿದರು.



ಈ ಘೋಷಣೆ ರಾಜಕೀಯ ಹಾಗೂ ಸಾಮಾಜಿಕ ವಲಯದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿದೆ. ಕೆಲವರು ಇದನ್ನು ದೂರದೃಷ್ಟಿಯ ನಿರ್ಧಾರ ಎಂದು ಶ್ಲಾಘಿಸುತ್ತಿದ್ದರೆ, ಇನ್ನೂ ಕೆಲವರು ಜನಸಂಖ್ಯೆ ಹೆಚ್ಚಳಕ್ಕೆ ಉತ್ತೇಜನ ನೀಡುವ ಬದಲು ಶಿಕ್ಷಣ, ಆರೋಗ್ಯ ಮತ್ತು ಉದ್ಯೋಗ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

ತಜ್ಞರ ಪ್ರಕಾರ, ನಗರೀಕರಣ, ಜೀವನ ವೆಚ್ಚ ಏರಿಕೆ, ಉದ್ಯೋಗ ಒತ್ತಡ ಮತ್ತು ಕುಟುಂಬದ ಯೋಜನೆಗಳ ಬದಲಾವಣೆಗಳಿಂದ ಜನರು ಕಡಿಮೆ ಮಕ್ಕಳಿಗೆ ಆದ್ಯತೆ ನೀಡುತ್ತಿದ್ದಾರೆ. ವಿಶೇಷವಾಗಿ ಯುವ ದಂಪತಿಗಳು ಎರಡು ಮಕ್ಕಳಿಗಿಂತ ಹೆಚ್ಚು ಮಕ್ಕಳನ್ನು ಹೊಂದಲು ಹಿಂದೇಟು ಹಾಕುತ್ತಿದ್ದಾರೆ. ಈ ಕಾರಣದಿಂದ ಅನೇಕ ರಾಜ್ಯಗಳಲ್ಲಿ ಜನನ ಪ್ರಮಾಣ ಕುಸಿತ ಕಂಡುಬರುತ್ತಿದೆ.

ಆಂಧ್ರಪ್ರದೇಶ ಸರ್ಕಾರದ ಈ ಹೊಸ ಯೋಜನೆ ಜನಸಂಖ್ಯೆ ಹೆಚ್ಚಳಕ್ಕೆ ಎಷ್ಟು ಮಟ್ಟಿಗೆ ಪರಿಣಾಮಕಾರಿಯಾಗಲಿದೆ ಎಂಬುದು ಮುಂದಿನ ದಿನಗಳಲ್ಲಿ ಸ್ಪಷ್ಟವಾಗಲಿದೆ. ಆದರೆ ಜನಸಂಖ್ಯೆ ಕುಸಿತದ ಬಗ್ಗೆ ಸರ್ಕಾರಗಳು ಈಗ ಗಂಭೀರವಾಗಿ ಚಿಂತನೆ ನಡೆಸುತ್ತಿರುವುದು ಈ ಘೋಷಣೆಯಿಂದ ಸ್ಪಷ್ಟವಾಗಿದೆ.

## ಮತ್ತೆ ಏರಿದ ಸಿಎನ್‌ಜಿ ದರ

**ನವದೆಹಲಿ:** ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಕೇಂದ್ರ ಸರ್ಕಾರ ಮತ್ತೊಮ್ಮೆ ಬೆಲೆ ಏರಿಕೆ ಶಾಕ್ ನೀಡಿದ್ದು, ಸಿಎನ್‌ಜಿ ದರವನ್ನು ಮತ್ತೆ ಕೆಜಿಗೆ 1 ರೂಪಾಯಿ ಹೆಚ್ಚಳ ಮಾಡಲಾಗಿದೆ. ಕೇವಲ 48 ಗಂಟೆಗಳ ಅವಧಿಯಲ್ಲಿ ಇದು ಎರಡನೇ ಬಾರಿಗೆ ದರ ಏರಿಕೆಯಾಗಿದ್ದು, ಸತತ ಬೆಲೆ ಏರಿಕೆಯಿಂದ ಆಟೋ, ಕ್ಯಾಬ್ ಚಾಲಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಇದಕ್ಕೂ ಎರಡು ದಿನಗಳ ಹಿಂದಷ್ಟೇ ಸಿಎನ್‌ಜಿ ದರವನ್ನು ಕೆಜಿಗೆ 2 ರೂಪಾಯಿ ಹೆಚ್ಚಿಸಲಾಗಿತ್ತು. ಇದೀಗ ಮತ್ತೆ 1 ರೂಪಾಯಿ ಏರಿಕೆಯಾಗಿರುವ ಹಿನ್ನೆಲೆ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಪ್ರತಿ ಕೆಜಿ ಸಿಎನ್‌ಜಿ ದರ 80.09 ರೂಪಾಯಿಗೆ ತಲುಪಿದೆ. ಮುಂಬೈನಲ್ಲಿ 84 ರೂ., ಗುರುಗ್ರಾಮದಲ್ಲಿ 84.12 ರೂ. ಮತ್ತು ಬೆಂಗಳೂರಿನಲ್ಲಿ ಸುಮಾರು 90 ರೂ. ಪ್ರತಿ ಕೆಜಿಗೆ ತಲುಪಿರುವುದಾಗಿ ವರದಿಯಾಗಿದೆ.

ಸರ್ಕಾರಿ ತೈಲ ಕಂಪನಿಗಳ ಪ್ರಕಾರ, ಜಾಗತಿಕ ಇಂಧನ ಮಾರುಕಟ್ಟೆಯ ಅಸ್ಥಿರತೆ, ಮಧ್ಯಪ್ರಾಚ್ಯ ಉದ್ವಿಗ್ನತೆ ಹಾಗೂ ಹೆಚ್ಚಿದ ಇನ್‌ಪುಟ್ ವೆಚ್ಚಗಳಿಂದಾಗಿ ಸಿಎನ್‌ಜಿ ದರ ಏರಿಕೆ ಅನಿವಾರ್ಯವಾಗಿದೆ ಎಂದು ತಿಳಿಸಲಾಗಿದೆ. ಜಾಗತಿಕ ಮಟ್ಟದಲ್ಲಿ ಇಂಧನ ಬೆಲೆಗಳು ನಿರಂತರ ಏರಿಕೆಯಾಗುತ್ತಿರುವ ಹಿನ್ನೆಲೆ, ಅದರ ಪರಿಣಾಮ ದೇಶೀಯ ಮಾರುಕಟ್ಟೆಯ ಮೇಲೂ ಬೀಳುತ್ತಿದೆ ಎಂದು ಮೂಲಗಳು ತಿಳಿಸಿವೆ.

ಸಿಎನ್‌ಜಿ ದರ ಏರಿಕೆಯಿಂದ ಪ್ರಮುಖವಾಗಿ ಆಟೋ ಮತ್ತು ಟ್ಯಾಕ್ಸಿ ಚಾಲಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ದಿನಕ್ಕೆ ಹಲವು ಕಿಲೋಮೀಟರ್ ಸಂಚಾರ ಮಾಡುವ ಚಾಲಕರಿಗೆ ಇಂಧನ ವೆಚ್ಚವೇ ದೊಡ್ಡ ಹೊರೆ ಆಗಿದ್ದು, ಈಗಿನ ದರ ಏರಿಕೆಯಿಂದ ಆದಾಯ ಮತ್ತು ಖರ್ಚಿನ ಸಮತೋಲನ ಕಷ್ಟವಾಗಿದೆ ಎಂದು ಚಾಲಕರು ಅಳಲು ತೋಡಿಕೊಂಡಿದ್ದಾರೆ.

ದೆಹಲಿ ಆಟೋ ರಿಕ್ಷಾ ಯೂನಿಯನ್ ಹಾಗೂ ಟ್ಯಾಕ್ಸಿ ಸಂಘಟನೆಗಳು ಈಗಾಗಲೇ ಸರ್ಕಾರಕ್ಕೆ ಪತ್ರ ಬರೆದು ದರ ಪರಿಷ್ಕರಣೆಗೆ ಒತ್ತಾಯಿಸಿವೆ. ಕನಿಷ್ಠ ಬಾಡಿಗೆ ಹಾಗೂ ಪ್ರತಿ ಕಿಲೋಮೀಟರ್ ದರ ಹೆಚ್ಚಳ ಮಾಡುವಂತೆ ಬೇಡಿಕೆ ಇಟ್ಟಿವೆ. ಮುಂಬೈ ಹಾಗೂ ಬೆಂಗಳೂರು ಸೇರಿದಂತೆ ಹಲವು ನಗರಗಳಲ್ಲೂ ಆಟೋ ಚಾಲಕರ ಸಂಘಟನೆಗಳು ಮೀಟರ್ ದರ ಪರಿಷ್ಕರಣೆಗಾಗಿ ಸರ್ಕಾರದ ಮೇಲೆ ಒತ್ತಡ ಹಾಕುತ್ತಿವೆ.

ಬೆಂಗಳೂರುದಲ್ಲಿಯೂ ಸಿಎನ್‌ಜಿ ದರ ಏರಿಕೆ ಆಟೋ ಚಾಲಕರ ಮೇಲೆ ದೊಡ್ಡ ಪರಿಣಾಮ ಬೀರಿದೆ. ಆಟೋ ಚಾಲಕರ ಸಂಘಟನೆಗಳು "ಒನ್ ಸಿಟಿ, ಒನ್ ರೇಟ್" ಜಾರಿಗೆ ತರಬೇಕು ಮತ್ತು ಮೀಟರ್ ದರವನ್ನು ಪರಿಷ್ಕರಿಸಬೇಕು ಎಂದು ಆಗ್ರಹಿಸಿವೆ. ಇಲ್ಲವಾದರೆ ಜೀವನ ನಿರ್ವಹಣೆ ಕಷ್ಟವಾಗುತ್ತದೆ ಎಂದು ಹೇಳಿವೆ.

## ಕೊರೋನಾ, ಯುದ್ಧದ ಬಳಿಕ ಇಂಧನ ಬಿಕ್ಕಟ್ಟು; ಮತ್ತೆ ಬಡತನ ಭೀತಿ: ಮೋದಿ ಎಚ್ಚರಿಕೆ

### ಜಾಗತಿಕ ಸಂಕಷ್ಟ ಮುಂದುವರಿದರೆ ವಿಶ್ವದ ಅಭಿವೃದ್ಧಿಗೆ ಭಾರೀ ಹಿನ್ನಡೆ ಆಗಲಿದೆ ಎಂದ ಪ್ರಧಾನಿ ಮೋದಿ

**ನೆದರ್‌ಲ್ಯಾಂಡ್ಸ್:** ಜಾಗತಿಕ ಇಂಧನ ಬಿಕ್ಕಟ್ಟು, ಮಧ್ಯಪ್ರಾಚ್ಯದಲ್ಲಿನ ಯುದ್ಧ ಪರಿಸ್ಥಿತಿ ಮತ್ತು ಆರ್ಥಿಕ ಅಸ್ಥಿರತೆ ಕುರಿತು ಪ್ರಧಾನಿ ನರೇಂದ್ರ ಮೋದಿ ಗಂಭೀರ ಎಚ್ಚರಿಕೆ ನೀಡಿದ್ದಾರೆ. ಪ್ರಸ್ತುತ ಜಗತ್ತು ಎದುರಿಸುತ್ತಿರುವ ಪರಿಸ್ಥಿತಿ ಇದೇ ರೀತಿ ಮುಂದುವರಿದರೆ, ಕಳೆದ ಹಲವು ದಶಕಗಳಲ್ಲಿ ವಿಶ್ವ ಸಾಧಿಸಿರುವ ಅಭಿವೃದ್ಧಿ ಹಿನ್ನಡೆಯಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದ ಪ್ರಧಾನಿ ಮೋದಿ, ಕೋಟ್ಯಂತರ ಜನರು ಮತ್ತೆ ಬಡತನಕ್ಕೆ ತಳ್ಳಲ್ಪಡುವ ಅಪಾಯ ಎದುರಾಗಿದೆ ಎಂದು ಹೇಳಿದ್ದಾರೆ.

ನೆದರ್‌ಲ್ಯಾಂಡ್ಸ್ ಪ್ರವಾಸದ ವೇಳೆ ಅಲ್ಲಿನ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಕೊರೊನಾ ಮಹಾಮಾರಿಯ ನಂತರ ಜಗತ್ತು ಇನ್ನೂ ಸಂಪೂರ್ಣವಾಗಿ ಚೇತರಿಸಿಕೊಳ್ಳುವ ಮುನ್ನವೇ ಯುದ್ಧಗಳು ಮತ್ತು ಇಂಧನ ಬಿಕ್ಕಟ್ಟುಗಳು ಜಾಗತಿಕ ಆರ್ಥಿಕತೆಯನ್ನು ತೀವ್ರ ಸಂಕಷ್ಟಕ್ಕೆ ತಳ್ಳಿವೆ ಎಂದು ಹೇಳಿದರು.

"ಮೊದಲು ಕೋವಿಡ್ ಮಹಾಮಾರಿ, ನಂತರ ಹಲವು ಯುದ್ಧಗಳು, ಈಗ ಇಂಧನ ಸಂಕಷ್ಟ ಜಗತ್ತು 'ವಿಪತ್ತುಗಳ ದಶಕ'ವನ್ನು ಎದುರಿಸುತ್ತಿದೆ. ಈ ಪರಿಸ್ಥಿತಿ ಬದಲಾಗದಿದ್ದರೆ ಜಾಗತಿಕ ಅಭಿವೃದ್ಧಿಗೆ ಭಾರೀ ಹಿನ್ನಡೆಯಾಗಲಿದೆ" ಎಂದು ಪ್ರಧಾನಿ ಮೋದಿ ಎಚ್ಚರಿಸಿದರು.

- ಜಾಗತಿಕ ಬಿಕ್ಕಟ್ಟು ತೀವ್ರ
- ಇಂಧನ ಬೆಲೆ ಏರಿಕೆ
- ಬಡತನ ಭೀತಿ ಹೆಚ್ಚಳ
- ಯುದ್ಧದ ಪರಿಣಾಮ ಗಂಭೀರ
- ಇಂಧನ ಉಳಿತಾಯ ಕರೆ
- ಆರ್ಥಿಕ ಒತ್ತಡ ಹೆಚ್ಚಳ

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷಗಳ ಪರಿಣಾಮ ಜಾಗತಿಕ ತೈಲ ಮಾರುಕಟ್ಟೆಯ ಮೇಲೆ ಭಾರೀ ಪರಿಣಾಮ ಬೀರಿದೆ. ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಬೆಲೆಗಳು ಅನೇಕ ದೇಶಗಳಲ್ಲಿ ಏರಿಕೆಯಾಗುತ್ತಿದ್ದು, ಸಾಮಾನ್ಯ ಜನರ ಜೀವನ ವೆಚ್ಚ ಹೆಚ್ಚಾಗಿದೆ. ವಿಶೇಷವಾಗಿ ಇಂಧನ ಆಮದು ಮೇಲೆ ಅವಲಂಬಿತವಾಗಿರುವ ಭಾರತ ಸೇರಿದಂತೆ ಅನೇಕ ದೇಶಗಳ ಆರ್ಥಿಕತೆ ಮೇಲೆ ಒತ್ತಡ ಹೆಚ್ಚಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.

"ಇಂಧನ ಬೆಲೆ ಏರಿಕೆಯ ಪರಿಣಾಮ ಕೇವಲ ಸಾರಿಗೆ ಅಥವಾ ಕೈಗಾರಿಕೆಗಳ ಮೇಲೆ ಮಾತ್ರವಲ್ಲ, ಆಹಾರ ಪದಾರ್ಥಗಳ ಬೆಲೆ, ಕೃಷಿ, ಉತ್ಪಾದನೆ ಮತ್ತು ದೈನಂದಿನ ಜೀವನದ ಮೇಲೂ ಬೀಳುತ್ತಿದೆ. ಇದರಿಂದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಹೆಚ್ಚು ಸಂಕಷ್ಟ ಅನುಭವಿಸುತ್ತಿವೆ" ಎಂದು ಹೇಳಿದರು.

ಪ್ರಧಾನಿ ಮೋದಿ ಜಾಗತಿಕ ಬಿಕ್ಕಟ್ಟಿನ ಪರಿಣಾಮವಾಗಿ ವಿಶ್ವದ ಅನೇಕ ದೇಶಗಳಲ್ಲಿ ಬಡತನ ಮತ್ತೆ ಹೆಚ್ಚಾಗುವ ಸಾಧ್ಯತೆ ಇರುವುದಾಗಿ ಎಚ್ಚರಿಸಿದರು. "ಕಳೆದ ಹಲವು ವರ್ಷಗಳಲ್ಲಿ ಕೋಟ್ಯಂತರ ಜನರನ್ನು ಬಡತನದಿಂದ ಹೊರತೆಗೆದ ವಿಶ್ವದ ಪ್ರಯತ್ನಗಳು ಮತ್ತೆ ಹಿನ್ನಡೆಯಾಗುವ ಅಪಾಯ ಇದೆ. ಆದ್ದರಿಂದ ವಿಶ್ವ ರಾಷ್ಟ್ರಗಳು ಒಟ್ಟಾಗಿ ಕೆಲಸ ಮಾಡಬೇಕಾದ ಅಗತ್ಯ ಬಂದಿದೆ" ಎಂದು ಹೇಳಿದರು.

ಈ ವೇಳೆ ಭಾರತದಲ್ಲಿ ಇಂಧನ ಉಳಿತಾಯದ ಅಗತ್ಯವನ್ನೂ ಪ್ರಧಾನಿ ಮೋದಿ ಒತ್ತಿ ಹೇಳಿದರು. "ಅಗತ್ಯವಿಲ್ಲದ ಪ್ರಯಾಣಗಳನ್ನು ಕಡಿಮೆ ಮಾಡಿ, ಸಾಧ್ಯವಾದರೆ ವರ್ಕ್ ಫ್ರಂ ಹೋಮ್ ಅನುಸರಿಸಿ, ಕಾರ್‌ಪೂಲಿಂಗ್ ಮತ್ತು ಸಾರ್ವಜನಿಕ ಸಾರಿಗೆ ಬಳಕೆಯನ್ನು ಹೆಚ್ಚಿಸಿ. ನಾವು ಇಂಧನ ಉಳಿಸುವುದು ಅಂದರೆ ದೇಶದ ವಿದೇಶಿ ವಿನಿಮಯವನ್ನು ಉಳಿಸುವುದೂ ಆಗುತ್ತದೆ" ಎಂದು ಜನರಿಗೆ ಕರೆ ನೀಡಿದರು.

ಭಾರತ ತನ್ನ ತೈಲ ಅವಶ್ಯಕತೆಗಳ ಬಹುಪಾಲನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತಿರುವ ಹಿನ್ನೆಲೆ, ಜಾಗತಿಕ ಮಾರುಕಟ್ಟೆಯ ಏರಿಳಿತಗಳು ನೇರವಾಗಿ ದೇಶದ ಆರ್ಥಿಕತೆಯ ಮೇಲೆ ಪರಿಣಾಮ ಬೀರುತ್ತವೆ ಎಂದು ತಜ್ಞರು ಹೇಳುತ್ತಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನ ಪರಿಸ್ಥಿತಿ ಇನ್ನಷ್ಟು ಗಂಭೀರವಾದರೆ, ಮುಂದಿನ ದಿನಗಳಲ್ಲಿ ಇಂಧನ ಬೆಲೆಗಳು ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ.

ಆದರೆ ಪ್ರಸ್ತುತ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಅಥವಾ ಅಡುಗೆ ಅನಿಲದ ಕೊರತೆ ಇಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಆದರೂ ಜಾಗತಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟು ಕೊಂಡು ಎಚ್ಚರಿಕೆಯಿಂದ ನಡೆದುಕೊಳ್ಳಬೇಕಾಗಿದೆ ಎಂದು ಹೇಳಲಾಗಿದೆ.



ನೆದರ್‌ಲ್ಯಾಂಡ್ಸ್ ಜೊತೆಗಿನ ಸಹಕಾರದ ವಿಚಾರವನ್ನೂ ಪ್ರಧಾನಿ ಮೋದಿ ಪ್ರಸ್ತಾಪಿಸಿದರು. "ಭಾರತ ಮತ್ತು ನೆದರ್‌ಲ್ಯಾಂಡ್ಸ್ ಸೇರಿ ಭವಿಷ್ಯಕ್ಕೆ ಸುರಕ್ಷಿತ ಹಾಗೂ ವಿಶ್ವಾಸಾರ್ಹ ಸರಬರಾಜು ಸರಪಳಿ ನಿರ್ಮಾಣದತ್ತ ಕೆಲಸ ಮಾಡುತ್ತಿವೆ. ಜಾಗತಿಕ ಸವಾಲುಗಳನ್ನು ಒಬ್ಬ ದೇಶ ಮಾತ್ರ ಎದುರಿಸಲು ಸಾಧ್ಯವಿಲ್ಲ. ವಿಶ್ವದ ರಾಷ್ಟ್ರಗಳು ಒಟ್ಟಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಇಂತಹ ಬಿಕ್ಕಟ್ಟಿನಿಂದ ಹೊರಬರಲು ಸಾಧ್ಯ" ಎಂದು ಹೇಳಿದರು.

ಪ್ರಧಾನಿ ಮೋದಿ ಅವರ ಈ ಎಚ್ಚರಿಕೆ ಇದೀಗ ಜಾಗತಿಕ ಆರ್ಥಿಕ ಪರಿಸ್ಥಿತಿ, ಯುದ್ಧದ ಪರಿಣಾಮ ಮತ್ತು ಇಂಧನ ಸಂಕಷ್ಟದ ಬಗ್ಗೆ ಹೊಸ ಚರ್ಚೆಗೆ ಕಾರಣವಾಗಿದೆ. ವಿಶೇಷವಾಗಿ ಮಧ್ಯಮ ವರ್ಗ ಹಾಗೂ ಸಾಮಾನ್ಯ ಜನರ ಜೀವನ ವೆಚ್ಚದ ಮೇಲೆ ಇದರ ಪರಿಣಾಮ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಸರ್ಕಾರಗಳು ಕೈಗೊಳ್ಳುವ ಕ್ರಮಗಳ ಮೇಲೆ ಜಗತ್ತಿನ ಗಮನ ಕೇಂದ್ರೀಕೃತವಾಗಿದೆ.

## ಬೆಂಗಳೂರು–ಮುಂಬೈ ರೈಲು ಉದ್ಘಾಟನೆ ಕಾರ್ಯಕ್ರಮದಲ್ಲಿ ಕನ್ನಡ ಕಡೆಗಣನೆ

**ಬೆಂಗಳೂರು:** ಬೆಂಗಳೂರು–ಮುಂಬೈ ಹೊಸ ರೈಲು ಸೇವೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಕನ್ನಡ ಭಾಷೆಗೆ ಆದ್ಯತೆ ನೀಡಲಾಗಿಲ್ಲ ಎಂಬ ಆರೋಪ ರಾಜ್ಯದಲ್ಲಿ ಹೊಸ ವಿವಾದಕ್ಕೆ ಕಾರಣವಾಗಿದೆ. ನಗರದ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ರೈಲು ನಿಲ್ದಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವೇದಿಕೆ, ಫ್ಲೆಕ್ಸ್ ಹಾಗೂ ಮಾಹಿತಿ ಫಲಕಗಳಲ್ಲಿ ಇಂಗ್ಲಿಷ್ ಭಾಷೆಗೆ ಮಾತ್ರ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ ಎಂದು ಕನ್ನಡ ಪರ ಸಂಘಟನೆಗಳು ಮತ್ತು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.




ಹೊಸ ಬೆಂಗಳೂರು–ಮುಂಬೈ ರೈಲು ಸೇವೆಯ ಉದ್ಘಾಟನೆ ವೇಳೆ ಕೇಂದ್ರ ರೈಲ್ವೆ ಸಚಿವಾಲಯದ ಅಧಿಕಾರಿಗಳು, ರೈಲ್ವೆ ಇಲಾಖೆ ಪ್ರತಿನಿಧಿಗಳು ಹಾಗೂ ಕೇಂದ್ರ ಸಚಿವ ವಿ ಸೋಮಣ್ಣ ಭಾಗವಹಿಸಿದ್ದರು. ಆದರೆ ಕಾರ್ಯಕ್ರಮದ ವೇದಿಕೆಯಲ್ಲಿ ಕನ್ನಡ ಭಾಷೆಯ ಬಳಕೆ ಅತ್ಯಲ್ಪವಾಗಿದ್ದು, ಬಹುತೇಕ ಫ್ಲೆಕ್ಸ್‌ಗಳು ಹಾಗೂ ಸೂಚನಾ ಫಲಕಗಳು ಇಂಗ್ಲಿಷ್‌ನಲ್ಲೇ ಇದ್ದವು ಎನ್ನಲಾಗಿದೆ. ಇದರಿಂದ ಕನ್ನಡಿಗರಲ್ಲಿ ಅಸಮಾಧಾನ ವ್ಯಕ್ತವಾಗಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಕಾರ್ಯಕ್ರಮದ ಫೋಟೋಗಳು ಮತ್ತು ವಿಡಿಯೋಗಳು ವೈರಲ್ ಆಗುತ್ತಿದ್ದಂತೆ ಕನ್ನಡ ಪರ ಹೋರಾಟಗಾರರು ತೀವ್ರ ವಿರೋಧ ವ್ಯಕ್ತಪಡಿಸಿದರು. "ಕರ್ನಾಟಕದಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳಲ್ಲಿ ಕನ್ನಡಕ್ಕೆ ಮೊದಲ ಆದ್ಯತೆ ಇರಬೇಕು. ಕನ್ನಡವನ್ನು ನಿರ್ಲಕ್ಷಿಸುವುದು ಕನ್ನಡಿಗರ ಆತ್ಮಗೌರವಕ್ಕೆ ಧಕ್ಕೆ" ಎಂದು ಹಲವರು ಆಕ್ರೋಶ ಹೊರಹಾಕಿದರು.

ಈ ಘಟನೆ ಬಳಿಕ ಕೇಂದ್ರ ಸಚಿವ ವಿ. ಸೋಮಣ್ಣ ಸ್ಪಷ್ಟನೆ ನೀಡಿದ್ದು, "ಕನ್ನಡವನ್ನು ಯಾರೂ ಕಡೆಗಣಿಸಿಲ್ಲ. ಕೆಲವು ತಾಂತ್ರಿಕ ಕಾರಣಗಳಿಂದ ಇಂಗ್ಲಿಷ್ ಫ್ಲೆಕ್ಸ್ ಬಳಸಲಾಗಿದೆ" ಎಂದು ಹೇಳಿದ್ದಾರೆ ಎನ್ನಲಾಗಿದೆ. ಜೊತೆಗೆ ಮುಂದಿನ ದಿನಗಳಲ್ಲಿ ಕನ್ನಡಕ್ಕೆ ಸೂಕ್ತ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿರುವುದಾಗಿ ವರದಿಯಾಗಿದೆ.

ಈ ಹಿಂದೆ ಕೂಡ ರೈಲ್ವೆ ನೇಮಕಾತಿ ಪರೀಕ್ಷೆಗಳಲ್ಲಿ ಕನ್ನಡ ಭಾಷೆಯನ್ನು ಕಡೆಗಣಿಸಲಾಗಿದೆ ಎಂಬ ಆರೋಪ ಕೇಳಿಬಂದಿತ್ತು. ಕನ್ನಡ ಪರ ಸಂಘಟನೆಗಳು ಹಲವು ಬಾರಿ ಪ್ರತಿಭಟನೆ ನಡೆಸಿ, ರೈಲ್ವೆ ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದವು. ರೈಲ್ವೆ ಪರೀಕ್ಷೆಗಳಲ್ಲಿ ಕನ್ನಡಕ್ಕೆ ಅವಕಾಶ ನೀಡುವ ವಿಚಾರದಲ್ಲೂ ವಿವಾದ ಉಂಟಾಗಿತ್ತು ಎಂದು ವರದಿಗಳು ಸೂಚಿಸುತ್ತವೆ.

ರಾಜ್ಯದಲ್ಲಿ ಕನ್ನಡ ಭಾಷೆ ಮತ್ತು ಸ್ಥಳೀಯತೆಗೆ ಸಂಬಂಧಿಸಿದ ವಿಚಾರಗಳು ಪದೇಪದೇ ಚರ್ಚೆಗೆ ಗ್ರಾಸವಾಗುತ್ತಿವೆ. ವಿಶೇಷವಾಗಿ ಕೇಂದ್ರ ಸರ್ಕಾರದ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಕನ್ನಡ ಬಳಕೆ ಕಡಿಮೆ ಆಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಈ ಹಿನ್ನೆಲೆ ಬೆಂಗಳೂರು–ಮುಂಬೈ ರೈಲು ಉದ್ಘಾಟನಾ ಕಾರ್ಯಕ್ರಮದ ವಿವಾದವೂ ಮತ್ತೊಮ್ಮೆ ಭಾಷಾ ಪ್ರಾಮುಖ್ಯತೆಯ ಚರ್ಚೆಯನ್ನು ಮುನ್ನೆಲೆಗೆ ತಂದಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಅನೇಕರು "ಕರ್ನಾಟಕದಲ್ಲಿ ಕನ್ನಡವೇ ಮೊದಲ ಆದ್ಯತೆ ಆಗಬೇಕು" ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದು, ಸರ್ಕಾರಿ ಕಾರ್ಯಕ್ರಮಗಳಲ್ಲಿ ಕನ್ನಡ ಬಳಕೆಯನ್ನು ಕಡ್ಡಾಯಗೊಳಿಸಬೇಕು ಎಂಬ ಒತ್ತಾಯವೂ ಕೇಳಿಬರುತ್ತಿದೆ.

# ಸಾಲ ವಾಪಸ್ ಕೊಡು ಎಂದಿದ್ದಕ್ಕೆ ಕೊಲೆ



ಮುನಿರಾಜ್
ಆರೋಪಿ



ಮುನಿಯಪ್ಪ
ಸಾವನಪ್ಪಿರುವ ವ್ಯಕ್ತಿ

**ದೊಡ್ಡಬಳ್ಳಾಪುರ:** ಕೇವಲ 200 ರೂಪಾಯಿ ಸಾಲದ ವಿಚಾರಕ್ಕೆ ವ್ಯಕ್ತಿಯೊಬ್ಬನನ್ನು ದೊಣ್ಣೆಯಿಂದ ಹೊಡೆದು ಕೊಲೆ ಮಾಡಿರುವ ಘಟನೆ ದೊಡ್ಡಬಳ್ಳಾಪುರ ತಾಲೂಕಿನ ಅಪ್ಪಕಾರನಹಳ್ಳಿ ಗೇಟ್ ಸಮೀಪ ನಡೆದಿದ್ದು, ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಹಳೆಯ ಸಾಲದ ಹಣ ಕೇಳಿದ್ದಕ್ಕೆ ಕೋಪಗೊಂಡ ಆರೋಪಿ ಮನಸೋಯಿಚ್ಚೆ ಹಲ್ಲೆ ನಡೆಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಗಾಯಾಳು ಮೃತಪಟ್ಟಿದ್ದಾನೆ.

ಮೃತ ವ್ಯಕ್ತಿಯನ್ನು ದ್ಯಾವಸಂದ್ರ ಗ್ರಾಮದ ನಿವಾಸಿ ಮಂಜುನಾಥ್ (40) ಎಂದು ಗುರುತಿಸಲಾಗಿದೆ. ಆರೋಪಿ ಮುನಿರಾಜ್ (41) ಇದೀಗ ಪೊಲೀಸರ ವಶದಲ್ಲಿದ್ದಾನೆ.

ಮೇ 12ರಂದು ಬೆಳಗ್ಗೆ ಮುನಿರಾಜ್ ಟೀ ಕುಡಿಯಲು ಅಂಗಡಿ ಬಳಿ ಬಂದಿದ್ದಾನೆ. ಈ ವೇಳೆ ಮತ್ತೊಮ್ಮೆ ಸಾಲದಲ್ಲೇ ಟೀ ನೀಡುವಂತೆ ಕೇಳಿದ್ದಾನೆ ಎನ್ನಲಾಗಿದೆ. ಆಗ ಮಂಜುನಾಥ್ ಹಳೆಯ ಸಾಲದ ಹಣವನ್ನು ಮೊದಲು ಕೊಡುವಂತೆ ಹೇಳಿದ್ದಾನೆ. ಇದ-ರಿಂದ ಇಬ್ಬರ ಮಧ್ಯೆ ಮಾತಿಗೆ ಮಾತು ಬೆಳೆದು ಗಲಾಟೆ ನಡೆದಿದೆ.

ಕೋಪಗೊಂಡ ಮುನಿರಾಜ್ ಪಕ್ಕದಲ್ಲೇ ಇದ್ದ ನೀಲಗಿರಿ ಮರದ ದೊಣ್ಣೆಯನ್ನು ತೆಗೆದುಕೊಂಡು ಮಂಜುನಾಥ್ ತಲೆಗೆ ಮನಬಂದಂತೆ ಹಲ್ಲೆ ನಡೆಸಿದ್ದಾನೆ. ಗಂಭೀರವಾಗಿ ಗಾಯಗೊಂಡ ಮಂಜುನಾಥ್ ಅವರನ್ನು ತಕ್ಷಣ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟಿದ್ದಾರೆ.

ಆರೋಪಿ ಮುನಿರಾಜ್ ವಿರುದ್ಧ ಈ ಹಿಂದೆ ಕೂಡ ಗಂಭೀರ ಆರೋಪಗಳು ಇದ್ದವು ಎನ್ನಲಾಗಿದೆ. ತನ್ನ ಸ್ವಂತ ತಾಯಿಯ ಮೇಲೆಯೇ ಚಾಕುವಿನಿಂದ ಹಲ್ಲೆ ನಡೆಸಿದ ಪ್ರಕರಣದಲ್ಲಿ ಜೈಲು ಸೇರಿದ್ದ ಆತ, ಬಳಿಕ ಬೇಲ್ ಮೇಲೆ ಹೊರಬಂದಿದ್ದ. ಇದೀಗ ಮತ್ತೆ ಕೊಲೆ ಪ್ರಕರಣದಲ್ಲಿ ಸಿಲುಕಿದ್ದಾನೆ.

ಘಟನೆ ಸಂಬಂಧ ದೊಡ್ಡಬೆಳವಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಈ ಘಟನೆ ದೊಡ್ಡಬಳ್ಳಾಪುರ ಭಾಗದಲ್ಲಿ ಆತಂಕಕ್ಕೆ ಕಾರಣವಾಗಿದೆ.

## ತಹಸೀಲ್ದಾರ್‌ಗೆ ಎದೆನೋವು; ಚಿಕಿತ್ಸೆ ಬಳಿಕ ಚೇತರಿಕೆ

**ನೆಲಮಂಗಲ:** ಕರ್ತವ್ಯ ವೇಳೆ ತಹಸೀಲ್ದಾರ್‌ಗೆ ಎದೆನೋವು ಕಾಣಿಸಿಕೊಂಡ ಘಟನೆ ತಾಲೂಕಿನ ಕಚೇರಿಯಲ್ಲಿ ಆತಂಕಕ್ಕೆ ಕಾರಣವಾಯಿತು. ಕರ್ತವ್ಯದಲ್ಲಿದ್ದ ತಹಸೀಲ್ದಾರ್ ಮಲ್ಲೇಶ್ ಬೀರಪ್ಪ ಪೂಜಾರ್ ಅವರಿಗೆ ಏಕಾಏಕಿ ಎದೆನೋವು ಕಾಣಿಸಿಕೊಂಡಿದ್ದು, ತಕ್ಷಣ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ.

ತಾಲೂಕು ಕಚೇರಿಯಲ್ಲಿ ಬಿಎಲ್‌ಒಗಳ ಸಭೆ ನಡೆಸುತ್ತಿದ್ದ ವೇಳೆ ತಹಸೀಲ್ದಾರ್ ಮಲ್ಲೇಶ್ ಪೂಜಾರ್ ಅವರಿಗೆ ಎದೆನೋವಿನ ಜೊತೆಗೆ ತಲೆಸುತ್ತು ಕಾಣಿಸಿಕೊಂಡಿದೆ. ಅಲ್ಲದೆ ದೇಹ ಸಂಪೂರ್ಣ ಬೆವರಲು ಆರಂಭವಾದ ಹಿನ್ನೆಲೆಯಲ್ಲಿ ಹೃದಯಾಘಾತ ಆಗಿರಬಹುದು ಎಂದು ಉಂಟಾಗಿದೆ.

ತಕ್ಷಣ ಕಚೇರಿ ಸಿಬ್ಬಂದಿ ಅವರನ್ನು ತಾಲೂಕು ಕಚೇರಿ ಪಕ್ಕದ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದು ಪ್ರಾಥಮಿಕ ಚಿಕಿತ್ಸೆ ನೀಡಿದ್ದಾರೆ. ಬಳಿಕ ವೈದ್ಯರು ಸ್ಕ್ಯಾನ್ ನಡೆಸಿ ಪರಿಶೀಲನೆ ಮಾಡಿದ್ದು, ಯಾವುದೇ ಗಂಭೀರ ಸಮಸ್ಯೆ ಕಂಡುಬಂದಿಲ್ಲ ಎಂದು ತಿಳಿದುಬಂದಿದೆ.

ಹೆಚ್ಚಿನ ಪರೀಕ್ಷೆಗಾಗಿ ಅವರನ್ನು ಬಿಜಿಎಸ್ ಆಸ್ಪತ್ರೆಗೆ ದಾಖಲಿಸಿ ಎಕೋ ಸ್ಕ್ಯಾನ್ ಮಾಡಿಸಲಾಯಿತು. ಪರೀಕ್ಷಾ ವರದಿಯಲ್ಲಿ ಹೃದಯ ಸಂಬಂಧಿತ ಯಾವುದೇ ಸಮಸ್ಯೆ ಇಲ್ಲ ಎಂಬುದು ದೃಢಪಟ್ಟಿದೆ.

ಈ ಕುರಿತು ಮಾಹಿತಿ ನೀಡಿದ ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಸೋನಿಯಾ, ಗ್ಯಾಸ್ಟಿಕ್ ಸಮಸ್ಯೆಯಿಂದಾಗಿ ಎದೆನೋವು ಕಾಣಿಸಿಕೊಂಡಿದ್ದು, ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

## ಕಾಂಗ್ರೆಸ್ ಮುಖಂಡ ಕಚೇರಿ ಪಾಳ್ಯ ಡಿ. ವಿ. ಅಶ್ವತಪ್ಪ ನಿಧನ

**ದೊಡ್ಡಬಳ್ಳಾಪುರ:** ಕನ್ನಡ ಜಾಗೃತ ಪರಿಷತ್ತಿನ ಮಾಜಿ ಅಧ್ಯಕ್ಷ, ಕನ್ನಡಪರ ಹಿರಿಯ ಹೋರಾಟಗಾರ, ಕಾಂಗ್ರೆಸ್ ಮುಖಂಡ ಕಚೇರಿ ಪಾಳ್ಯದ ಡಿ. ವಿ. ಅಶ್ವತಪ್ಪ ಶನಿವಾರ ನಿಧನರಾಗಿದ್ದಾರೆ.



ಡಿ. ವಿ. ಅಶ್ವಥ್ ಮೂಲತಃ ಕನ್ನಡಪರ ಹೋರಾಟಗಾರರಾಗಿದ್ದು ಡಾ. ವೆಂಕಟರೆಡ್ಡಿ ರವರ ನೇತೃತ್ವದಲ್ಲಿ 80ರ ದಶಕದ ಆರಂಭದಲ್ಲಿ ನಡೆದ ಗೋಕಾಕ್ ಚಳುವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಸೆರೆ ಮನೆ ವಾಸ ಅನುಭವಿಸಿದ್ದರು. ಕಾಂಗ್ರೆಸ್ ಮುಖಂಡರಾಗಿದ್ದ ಅಶ್ವತ್ ಪ್ರೊ. ಃ. ಕೃಷ್ಣಪ್ಪ ಹಾಗೂ ನಂಜುಂಡ ಸ್ವಾಮಿ ರವರಿಂದ ಪ್ರೇರೇಪಿತರಾಗಿ ದಲಿತ ಚಳುವಳಿ, ರೈತ ಚಳುವಳಿಗಳು ಸೇರಿದಂತೆ ದೊಡ್ಡಬಳ್ಳಾಪುರದ ಅನೇಕ ಜನಪರ ಚಳುವಳಿಗಳಲ್ಲಿ ಅಹರ್ನಿಷಿ ಭಾಗಿಯಾಗಿದ್ದರು.

ಡಿ. ವಿ. ಅಶ್ವಥ್ ರವರ ನಿಧನಕ್ಕೆ ಮಾಜಿ ಶಾಸಕ ಅಪಕಾರನಹಳ್ಳಿ ವೆಂಕಟರಮಣಯ್ಯ, ಮಾಜಿ ನಗರಸಭಾಧ್ಯಕ್ಷ ತ. ನ. ಪ್ರಭುದೇವ್, ಹಿರಿಯ ಕನ್ನಡಪರ ಹೋರಾಟಗಾರರಾದ ಜಿ. ಸತ್ಯನಾರಾಯಣ,ಸಂಜೀವ್ ನಾಯಕ್, ಡಿ. ಪಿ. ಆಂಜನೇಯ, ಕನ್ನಡ ಜಾಗೃತ ಪರಿಷತ್ತು, ತಾಲೂಕು ಕನ್ನಡ ಪಕ್ಷ, ದೊಡ್ಡಬಳ್ಳಾಪುರ ತಾಲೂಕಿನ ದಲಿತ, ರೈತ, ಕನ್ನಡ ಪರ ಸಂಘಟನೆಗಳು ಸೇರಿದಂತೆ ಅಶ್ವಥ್ ರವರ ಒಡನಾಡಿಗಳು, ಗಣ್ಯರು ಸಂತಾಪ ಸೂಚಿಸಿದ್ದಾರೆ.

# ಸನಾತನ ಹಿಂದೂ ಧರ್ಮದ ಉಳಿವಿಗೆ ಸಂಘಟನೆ ಅಗತ್ಯ




**ಹುಬ್ಬಳ್ಳಿ:** ಸನಾತನ ಹಿಂದೂ ಧರ್ಮ ಉಳಿವಿಗೆ ಸಂಘಟನೆ ಅಗತ್ಯ. ಈ ಹಿನ್ನೆಲೆಯಲ್ಲಿ ಶಬರಿಮಲೈ ಅಯ್ಯಪ್ಪ ಸೇವಾ ಸಮಾಜಂ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದು ಶಾಸಕ ಮಹೇಶ ಟೆಂಗಿನಕಾಯಿ ಅಭಿಪ್ರಾಯಪಟ್ಟರು.

ಶಿರೂರ ಪಾರ್ಕ್‌ನ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಶಬರಿಮಲೈ ಅಯ್ಯಪ್ಪ ಸೇವಾ ಸಮಾಜಂ (ಎಸ್‌ಎಎಸ್‌ಎಸ್) ವತಿಯಿಂದ ಶನಿವಾರ ಏರ್ಪಡಿಸಿದ್ದ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಯ್ಯಪ್ಪ ಸ್ವಾಮಿ ದೇವಸ್ಥಾನಕ್ಕೆ 70 ಲಕ್ಷಕ್ಕೂ ಹೆಚ್ಚು ಜನರು ಆಗಮಿಸುತ್ತಾರೆ. ಈ ನಿಟ್ಟಿನಲ್ಲಿ ಭಕ್ತರ ಪರವಾದ ಸಂಘಟನೆ ಅಗತ್ಯವಿತ್ತು. ಅಲ್ಲಿಯ ಕುಂದುಕೊರತೆ ನಿವಾರಣೆ, ಭಕ್ತರ ಬಯಕೆ ಈಡೇರಿಕೆಗೆ ಈ ಸಂಘಟನೆ ಕಾರ್ಯತತ್ಪರವಾಗಿದೆ. ಅನೇಕ ಬದಲಾವಣೆಗಳನ್ನು ತರಲಾಗಿದೆ. ಜಗತ್ತಿನಲ್ಲಿ ಅಯ್ಯಪ್ಪ ಸ್ವಾಮಿ ಭಕ್ತರು ಇರುವುದು ಇದೇ ಕಾರಣಕ್ಕೆ. ಹಿಂದೂಗಳಾದ ನಾವೆಲ್ಲ ಒಗ್ಗಟ್ಟಾಗಿರಬೇಕು ಎಂದು ಆಶಿಸಿದರು.

ಸ್ವರ್ಣ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕ, ಶ್ರೀ ಅಯ್ಯಪ್ಪ ಭಕ್ತ ವೃಂದ ಟ್ರಸ್ಟ್ ಉಪಾಧ್ಯಕ್ಷ ಡಾ.ವಿ.ಎಸ್.ವಿ. ಪ್ರಸಾದ ಮಾತನಾಡಿ, ಶಬರಿಮಲೈ ಅಯ್ಯಪ್ಪ ಸ್ವಾಮಿ ದರ್ಶನಕ್ಕೆ ಬಹಳಷ್ಟು ಭಕ್ತರು ತೆರಳುತ್ತಾರೆ. ಅಲ್ಲಿಯ ಕುಂದುಕೊರತೆ, ಆಗು-ಹೋಗುಗಳನ್ನು ಸೇವಾ ಸಮಾಜಂ ನೋಡಿಕೊಳ್ಳುತ್ತಿದೆ. ತ್ಯಾಗ ಮತ್ತು ಶ್ರದ್ಧೆಯಿಂದ ಸೇವೆ ಮಾಡುತ್ತಿದೆ. ಇಂದು ನಡೆಯುತ್ತಿರುವ ಕಾರ್ಯಕಾರಿಣಿಯಲ್ಲಿ ಚಿಂತನ-ಮಥನ ನಡೆಸಿ, 6 ತಿಂಗಳೊಳಗೆ ಕಾರ್ಯಾನುಷ್ಠಾನ ಆಗಬೇಕು. ಇದರಿಂದ ಸಮಾಜ ಹಾಗೂ ಭಕ್ತರಿಗೆ ಒಳಿತಾಗಲಿದೆ. ಶಿರೂರ ಪಾರ್ಕ್ ಅಯ್ಯಪ್ಪ ಸ್ವಾಮಿ ದೇವಸ್ಥಾನ ನಿರ್ಮಾಣಕ್ಕೆ ಕಾರಣೀಭೂತರಾದ ವಿಆರ್‌ಎಲ್ ಸಮೂಹ ಸಂಸ್ಥೆಗಳ ಚೇರ್ಮನ್ ಡಾ.ವಿಜಯ ಸಂಕೇಶ್ವರ ಹಾಗೂ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಆನಂದ ಸಂಕೇಶ್ವರ ಅವರಿಗೆ ಡಾ. ಪ್ರಸಾದ ಅವರು ಅಭಿನಂದನೆ ಸಲ್ಲಿಸಿದರು.

ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ ಮುತಾಲಿಕ್ ಮಾತನಾಡಿ, ನಮ್ಮ ಸನಾತನ ಧರ್ಮದ ಮೇಲೆ ಹಲವರಿಂದ ದಾಳಿಗಳಾಗಿವೆ. ಅದರಲ್ಲೂ ಹಿಂದೂಗಳ ಆತ್ಮವಾಗಿರುವ ದೇವಸ್ಥಾನ ಮತ್ತು ಮಠಗಳ ಮೇಲೆ ದಾಳಿಯಾಗಿವೆ. ಅವರು ಹಿಂದೂ ಧರ್ಮ ಈ ಮೂಲಕ ದಾಳಿ ಮಾಡುತ್ತಿದ್ದಾರೆ. ನಾವೆಲ್ಲ ಹಿಂದೂಗಳು ಜಾಗೃತರಾಗಬೇಕು. ಹಿಂದೂಗಳಿಗೆ ಆಗುತ್ತಿರುವ ಅಪಮಾನ, ಅಪಚಾರ, ಅಕ್ರಮಗಳನ್ನು ತಡೆಯಬೇಕು. ಈ ನಿಟ್ಟಿನಲ್ಲಿ ನಾವು ಸಂಘಟಿತರಾಗಬೇಕು ಎಂದರು.

ಎಸ್‌ಎಎಸ್‌ಎಸ್ ಕರ್ನಾಟಕ ಸಂಯೋಜಕ ಪಿ.ಎಸ್. ಪ್ರಕಾಶ ಮಾತನಾಡಿ, ದೇವಸ್ಥಾನಗಳು ನಮ್ಮ ಭಕ್ತಿ ಮತ್ತು ಶಕ್ತಿಯ ಕೇಂದ್ರಗಳು. ಭಾರತೀಯ ಹಿಂದೂ ಸಮಾಜ ಭಕ್ತಿ ಮತ್ತು ಶಕ್ತಿಯ ಸಮ್ಮಿಲನವಾಗಿದೆ. ನಾವು ಎರಡನ್ನೂ ಸಂಘಟಿತಗೊಳಿಸಬೇಕು. ಇದ-ರಿಂದ ನಮ್ಮ ಜೀವನ ಬೆಳಕಿನ ಕಡೆಗೆ ಹೋಗುತ್ತದೆ ಎಂದರು.

ಬೆಳಗ್ಗೆ ಎಸ್‌ಎಎಸ್‌ಎಸ್ ರಾಷ್ಟ್ರೀಯ ಉಪಾಧ್ಯಕ್ಷ ಆನಂದ ವಾಮನ ನಾಯಕ್ ಗೋಪೂಜೆ ನೆರವೇರಿಸಿದರು. ಹಿರಿಯ ಮಾರ್ಗದರ್ಶಕ ಸೇತುಮಾಧವನ್ ಧ್ವಜಾರೋಹಣ ನೆರವೇರಿಸಿದರು. ರಾಷ್ಟ್ರೀಯ ಅಧ್ಯಕ್ಷ ಎಸ್.ಜೆ.ಆರ್. ಕುಮಾರ ಅಧ್ಯಕ್ಷತೆ ವಹಿಸಿದ್ದರು. ದೇವಸ್ಥಾನದ ಧರ್ಮದರ್ಶಿ ಶ್ರೀ ಆನಂದ ಗುರುಸ್ವಾಮಿ ಸಾನ್ನಿಧ್ಯ ವಹಿಸಿದ್ದರು.

ಮಾಜಿ ಮೇಯರ್ ವೀಣಾ ಬರದ್ವಾಡ, ರಾಷ್ಟ್ರೀಯ ಕಾರ್ಯಕಾರಿ ಟಿ.ಬಿ. ಶೇಖರ್, ಪ್ರಮುಖರಾದ ಎ.ಆರ್. ಮೋಹನ, ಸೆಲ್ವನ್ ಮುರುಘನ್, ಪ್ರಕಾಶ ಗಣಪತಿ ಪೈ, ಈರೋಡು ಎನ್. ರಾಜನ್, ದೊರೈಶಂಕರ, ವಿನೋದ, ಡಾ.ಎನ್. ಜಯರಾಂ, ಶರಣ-ಕುಮಾರ ಶೆಟ್ಟಿ, ಪಿ. ದೇವರಾಜು, ಎಂ. ಮುನಿರಾಜು, ಎಚ್.ಆರ್. ಸಂಪತಕುಮಾರ, ಡಾ. ರಮೇಶ ಮುಧೋಳ, ದತ್ತು ಶಿಂತ್ರೆ ಇತರರು ಇದ್ದರು.

## ಗೃಹರಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯಲ್ಲಿ ಖಾಲಿ ಇರುವ 349 ಗೃಹರಕ್ಷಕರ ಹುದ್ದೆಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಗೃಹರಕ್ಷಕದಳದಿಂದ ಈ ಕುರಿತು ಅಧಿಕೃತ ಪ್ರಕಟಣೆ ಹೊರಡಿಸಲಾಗಿದೆ.

ಅರ್ಜಿ ನಮೂನೆಗಳನ್ನು ಇಂದಿನಿಂದ 30.05.2026ರವರೆಗೆ ಉಚಿತವಾಗಿ ವಿತರಿಸಲಾಗುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 08.06.2026 ಎಂದು ತಿಳಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಗೃಹರಕ್ಷಕ ದಳ ವೆಬ್‌ಸೈಟ್ ಹಾಗೂ ಕರ್ನಾಟಕ ರಾಜ್ಯ ಪೊಲೀಸ್ ವೆಬ್‌ಸೈಟ್ ವೀಕ್ಷಿಸಬಹುದು.

ಅರ್ಜಿ ನಮೂನೆಗಳನ್ನು ಸಮಾದೇಷ್ಟರು, ಗೃಹರಕ್ಷಕದಳ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಶೇಷಾದ್ರಿ ರಸ್ತೆ, ಬೆಂಗಳೂರು 560009 ಕಚೇರಿಯಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 080-22263447 ಸಂಖ್ಯೆಗೆ ಸಂಪರ್ಕಿಸಬಹುದು.

## ಮಲಗಿದ್ದ ಹಸುವಿನ ಮೇಲೆ ದೌರ್ಜನ್ಯ; ಸಿಸಿಟಿವಿಯಲ್ಲಿ ಸೆರೆಯಾದ ಘಟನೆ

**ಬೆಂಗಳೂರು:** ನಾಗರಿಕ ಸಮಾಜವೇ ತಲೆ ತಗ್ಗಿಸುವಂತಹ ಅಮಾನವೀಯ ಘಟನೆ ಬೆಂಗಳೂರಿನ ಕಾಟನ್‌ಪೇಟೆ ಪ್ರದೇಶದಲ್ಲಿ ಬೆಳಕಿಗೆ ಬಂದಿದೆ. ಕಾಮುಕನೊಬ್ಬ ರಾತ್ರಿ ವೇಳೆ ರಸ್ತೆ ಬದಿಯಲ್ಲಿ ಮಲಗಿದ್ದ ಹಸುವಿನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಘಟನೆ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸಾರ್ವಜನಿಕರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಘಟನೆ ಸಂಬಂಧ ಕಾಟನ್‌ಪೇಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಗಾಗಿ ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ.

ಮಾಹಿತಿಯ ಪ್ರಕಾರ, ಘಟನೆ ಇದೇ ತಿಂಗಳ 5ರಂದು ತಡರಾತ್ರಿ ನಡೆದಿದ್ದು, ಬೈಕ್‌ನಲ್ಲಿ ಬಂದ ಅಪರಿಚಿತ ವ್ಯಕ್ತಿಯೊಬ್ಬ ರಸ್ತೆ ಬದಿಯಲ್ಲಿ ಮಲಗಿದ್ದ ಹಸುವಿನ ಬಳಿ ನಿಂತಿದ್ದಾನೆ. ಸುತ್ತಮುತ್ತ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡ ಬಳಿಕ ಹಸುವಿನ ಮೇಲೆ ಅಸಭ್ಯ ಮತ್ತು ಅಮಾನವೀಯ ಕೃತ್ಯ ಎಸಗಿದ್ದಾನೆ ಎನ್ನಲಾಗಿದೆ. ಬಳಿಕ ಆತ ಯಾವುದೇ ಅನುಮಾನ ಬಾರದಂತೆ ಸ್ಥಳದಿಂದ ಪರಾ-ರಿಯಾಗಿದ್ದಾನೆ.

ಆರೋಪಿಯ ಈ ಕೃತ್ಯ ಸಮೀಪದ ಕಟ್ಟಡದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ನಂತರ ಸ್ಥಳೀಯರು ದೃಶ್ಯಾವಳಿ ಪರಿಶೀಲಿಸಿದಾಗ ಘಟನೆ ಬೆಳಕಿಗೆ ಬಂದಿದೆ. ತಕ್ಷಣ ಪೊಲೀಸ-ರಿಗೆ ಮಾಹಿತಿ ನೀಡಲಾಗಿದ್ದು, ಕಾಟನ್‌ಪೇಟೆ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸದ್ಯ ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಆದ-ರಿಸಿ ಆರೋಪಿಯ ಗುರುತು ಪತ್ತೆಹಚ್ಚಲು ಮುಂದಾಗಿದ್ದಾರೆ. ಆತ ಬೈಕ್‌ನಲ್ಲಿ ಬಂದಿರುವುದು ದೃಶ್ಯದಲ್ಲಿ ಕಂಡುಬಂದಿದ್ದು, ವಾಹನದ ಸಂಖ್ಯೆ ಮತ್ತು ಇತರೆ ಸುಳಿವುಗಳನ್ನು ಆಧರಿಸಿ ತನಿಖೆ ನಡೆಸಲಾಗುತ್ತಿದೆ. ಸಮೀಪದ ಇತರ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನೂ ಪೊಲೀಸರು ಪರಿಶೀಲಿಸುತ್ತಿದ್ದಾರೆ.

## ಪೊಲೀಸರಿಗೆ ಶರಣಾದ ಕೇಂದ್ರ ಸಚಿವ ಬಂಡಿ ಸಂಜಯ್ ಪುತ್ರ



**ಹೈದರಾಬಾದ್:** ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ ಕೇಂದ್ರ ಸಚಿವ ಬಂಡಿ ಸಂಜಯ್ ಪುತ್ರ ಭಗೀರಥ್ (25) ಕೊನೆಗೂ ಪೊಲೀಸರಿಗೆ ಶರಣಾಗಿದ್ದಾನೆ. ಪ್ರಕರಣ ದಾಖಲಾದ ಬಳಿಕ ಆತ ನಿರೀಕ್ಷಣಾ ಜಾಮೀನು ಕೋರಿ ತೆಲಂಗಾಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದ. ಆದರೆ ಮೇ 16ರಂದು ಹೈಕೋರ್ಟ್ ಜಾಮೀನು ಅರ್ಜಿಯನ್ನು ವಜಾಗೊಳಿಸಿತ್ತು.

ಜಾಮೀನು ನಿರಾಕರಣೆ ಯಾದ ಬೆನ್ನಲ್ಲೇ ಭಗೀರಥ್ ತಲೆಮರೆಸಿಕೊಂಡಿದ್ದಾನೆ ಎನ್ನಲಾಗಿತ್ತು. ಹೀಗಾಗಿ ಪೊಲೀಸರು ಆತನ ವಿರುದ್ಧ ಲುಕೌಟ್ ನೋಟಿಸ್ ಜಾರಿ ಮಾಡಿ ಶೋಧ ಕಾರ್ಯಾಚರಣೆ ಆರಂಭಿಸಿದ್ದರು. ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿದ್ದು, ಕೇಂದ್ರ ಸಚಿವ ಬಂಡಿ ಸಂಜಯ್ ಕುಮಾರ್ ಅವರಿಗೆ ಭಾರೀ ಮುಜುಗರ ತಂದಿತ್ತು.

ಪೊಲೀಸರ ಒತ್ತಡ ಹೆಚ್ಚಾಗುತ್ತಿದ್ದಂತೆ ಭಗೀರಥ್ ಕೊನೆಗೂ ಪೊಲೀಸರ ಮುಂದೆ ಹಾಜರಾಗಿ ಶರಣಾಗಿದ್ದಾನೆ. ಬಳಿಕ ಪೊಲೀಸರು ಆತನನ್ನು ಬಂಧಿಸಿ ವಿಚಾರಣೆ ಆರಂಭಿಸಿದ್ದಾರೆ. ಪ್ರಕರಣ ಸಂಬಂಧ ಇನ್ನಷ್ಟು ಮಾಹಿತಿ ಕಲೆಹಾಕಲಾಗುತ್ತಿದೆ.

ಈ ಕುರಿತು ಪ್ರತಿಕ್ರಿಯಿಸಿದ ಬಂಡಿ ಸಂಜಯ್ ಕುಮಾರ್, "ಕಾನೂನು ಮತ್ತು ನ್ಯಾಯಾಂಗ ವ್ಯವಸ್ಥೆಯ ಮೇಲೆ ನನಗೆ ಸಂಪೂರ್ಣ ಗೌರವ ಇದೆ. ಅದಕ್ಕಾಗಿ ನನ್ನ ಪುತ್ರನಿಗೆ ಪೊಲೀಸರ ಮುಂದೆ ಶರಣಾಗುವಂತೆ ಸೂಚಿಸಿದ್ದೆ. ಆತ ನಿರ್ದೋಷಿ ಎಂಬ ನಂಬಿಕೆ ನನಗಿದೆ. ಆದರೂ ಕಾನೂನಿನ ಮುಂದೆ ಎಲ್ಲರೂ ಒಂದೇ. ತನಿಖೆಗೆ ಸಂಪೂರ್ಣ ಸಹಕರಿಸುವಂತೆ ಹೇಳಿ ದ್ದೇನೆ" ಎಂದು ತಿಳಿಸಿದ್ದಾರೆ.

## ಕೆರೆಯಲ್ಲಿ ಮಾನವ ಬುರುಡೆ, ಮೂಳೆಗಳು ಪತ್ತೆ

**ಆನೇಕಲ್:** ಇಲ್ಲಿನ ಸರ್ಜಾಪುರ ಸಮೀಪದ ಮುಗಳೂರು ಕೆರೆ ಅಂಗಳದಲ್ಲಿ ಮಾನವ ತಲೆ ಬುರುಡೆ ಹಾಗೂ ಮೂಳೆಗಳು ಪತ್ತೆಯಾಗಿರುವ ಘಟನೆ ಆತಂಕಕ್ಕೆ ಕಾರಣವಾಗಿದೆ.



ಕುರಿಗಾಹಿಗಳು ಕೆರೆ ಅಂಗಳದಲ್ಲಿ ಬುರುಡೆ ಮತ್ತು ಮೂಳೆಗಳನ್ನು ಗಮನಿಸಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಮಾಹಿತಿ ತಿಳಿದು ಸ್ಥಳಕ್ಕೆ ಎಎಸ್ಪಿ ವೆಂಕಟೇಶ್ ಪ್ರಸನ್ನ ಹಾಗೂ ಡಿವೈಎಸ್ಪಿ ಗೋಪಾಲ್ ನಾಯಕ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸೋಕೋ ತಂಡ ಸ್ಥಳಕ್ಕೆ ಆಗಮಿಸಿ ಬುರುಡೆ ಮತ್ತು ಮೂಳೆಗಳ ಪರಿಶೀಲನೆ ನಡೆಸಿದೆ. ಸ್ಥಳದಲ್ಲಿ ಸೀರೆ ಪತ್ತೆಯಾಗಿರುವ ಹಿನ್ನೆಲೆ ಇದು ಮಹಿಳೆಯ ಶವ ಇರಬಹುದೆಂಬ ಶಂಕೆ ವ್ಯಕ್ತವಾಗಿದೆ. ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿರುವ ಸಾಧ್ಯತೆ ಇದೆ ಎನ್ನಲಾಗಿದೆ.

ಬೇಸಿಗೆ ಹಿನ್ನೆಲೆ ಕೆರೆಯ ನೀರಿನ ಪ್ರಮಾಣ ಕಡಿಮೆಯಾಗಿದ್ದು, ನಾಯಿಗಳು ಅಸ್ಥಿಪಂಜರವನ್ನು ಎಳೆದಾಡಿರಬಹುದೆಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಮೃತರ ಗುರುತು ಪತ್ತೆಗಾಗಿ ಪೊಲೀಸರು ಸುತ್ತಮುತ್ತಲಿನ ಠಾಣೆಗಳ ನಾಪತ್ತೆ ಪ್ರಕರಣಗಳ ಮಾಹಿತಿಯನ್ನು ಪರಿಶೀಲಿಸುತ್ತಿದ್ದಾರೆ.

ಅಸ್ಥಿಪಂಜರವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದ್ದು, ವರದಿ ಬಂದ ಬಳಿಕ ಸಾವಿನ ನಿಖರ ಕಾರಣ ತಿಳಿಯುವ ಸಾಧ್ಯತೆ ಇದೆ. ಈ ಕುರಿತು ಸರ್ಜಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಿರುಗಾಳಿ ಮಳೆಗೆ 10 ಲಕ್ಷದ ಮೌಲ್ಯದ ರೇಷ್ಮೆ ಬೆಳೆ ಹಾಗೂ ರೇಷ್ಮೆ ಮನೆ ನಾಶ

**ಹಾವೇರಿ:** ಜಿಲ್ಲೆಯಲ್ಲಿ ಸುರಿದ ಭಾರೀ ಬಿರುಗಾಳಿ ಮಳೆ ಜನಜೀವನ ಅಸ್ತವ್ಯಸ್ತಗೊಳಿಸಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ವಿಶೇಷವಾಗಿ ರೇಷ್ಮೆ ಬೆಳೆಗಾರರು ಭಾರೀ ನಷ್ಟ ಅನುಭವಿಸಿದ್ದು, ಬಿರುಗಾಳಿಯ ಅಬ್ಬರಕ್ಕೆ ರೇಷ್ಮೆ ಮನೆಯ ಮೇಲ್ಛಾವಣಿ ಹಾರಿ ಹೋಗಿ ಲಕ್ಷಾಂತರ ರೂಪಾಯಿ ಮೌಲ್ಯದ ರೇಷ್ಮೆ ಹುಳುಗಳು ನಾಶವಾಗಿರುವ ಘಟನೆ ಹಾವೇರಿ ತಾಲೂಕಿನ ಕಾಟೇನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಶೇಖಪ್ಪ ಕಳ್ಳಿಹಾಳ ಎಂಬ ರೈತರು ಸುಮಾರು 4 ಎಕರೆ ಪ್ರದೇಶದಲ್ಲಿ ರೇಷ್ಮೆ ಹುಳು ಸಾಕಾಣಿಕೆ ಮಾಡುತ್ತಿದ್ದರು. ಆದ-'ರೆ ಏಕಾಏಕಿ ಬೀಸಿದ ಬಿರುಗಾಳಿ ಮತ್ತು ಭಾರೀ ಮಳೆಯಿಂದ ರೇಷ್ಮೆ ಮನೆಯ ಮೇಲ್ಛಾವಣಿ ಸಂಪೂರ್ಣ ಹಾರಿ ಹೋಗಿದೆ. ಪರಿಣಾಮ ರೇಷ್ಮೆ ಹುಳುಗಳು ಮಳೆಗೆ ತತ್ತರಿಸಿ ಸಾಕಾಣಿಕೆ ಮನೆ ಸಂಪೂರ್ಣ ಹಾನಿಗೊಳಗಾಗಿದೆ.

ಘಟನೆಯಿಂದ ಸುಮಾರು 10 ಲಕ್ಷ ರೂಪಾಯಿಗೂ ಅಧಿಕ ಮೌಲ್ಯದ ರೇಷ್ಮೆ ಹುಳುಗಳು ಹಾಗೂ ರೇಷ್ಮೆ ಸಾಕಾಣಿಕೆ ಮನೆ ನಾಶವಾಗಿದೆ ಎಂದು ಅಂದಾಜಿಸಲಾಗಿದೆ. ವರ್ಷದ ಶ್ರಮ ಕ್ಷಣಾರ್ಧದಲ್ಲಿ ಹಾಳಾದ ಹಿನ್ನೆಲೆ ರೈತ ಶೇಖಪ್ಪ ಕಳ್ಳಿಹಾಳ ಕಂಗಾಲಾಗಿದ್ದಾರೆ.

ಬಿರುಗಾಳಿ ಮಧ್ಯೆಯೇ ಕುಟುಂಬಸ್ಥರು ಮತ್ತು ಸ್ಥಳೀಯರು ತಡರಾತ್ರಿ ತಾಡಪಲ್ ಹಾಕಿ ಉಳಿದ ರೇಷ್ಮೆ ಹುಳುಗಳನ್ನು ರಕ್ಷಿಸಲು ಹರಸಾಹಸ ಪಟ್ಟಿದ್ದಾರೆ. ಆದರೂ ಹೆಚ್ಚಿನ ಪ್ರಮಾಣದ ನಷ್ಟ ಸಂಭವಿಸಿರುವುದಾಗಿ ತಿಳಿದುಬಂದಿದೆ.

ಘಟನೆ ತಿಳಿಯುತ್ತಿದ್ದಂತೆ ಸ್ಥಳೀಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸರ್ಕಾರ ತಕ್ಷಣ ಪರಿಹಾರ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.

# ತಂದೆ ಸೇರಿ ಇಬ್ಬರು ಮಕ್ಕಳು ಸಾವು

**ಕೋಲಾರ:** ಜಿಲ್ಲೆಯ ಮಾಲೂರು ತಾಲೂಕಿನ ನಕ್ಕನಹಳ್ಳಿ ಗ್ರಾಮದಲ್ಲಿ ಹೃದಯವಿದ್ರಾವಕ ದುರಂತ ಸಂಭವಿಸಿದ್ದು, ಕೃಷಿ ಹೊಂಡದಲ್ಲಿ ಮುಳುಗಿ ತಂದೆ ಹಾಗೂ ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ. ಈ ದುರ್ಘಟನೆ ಇಡೀ ಗ್ರಾಮವನ್ನು ಶೋಕ ಸಾಗರದಲ್ಲಿ ಮುಳುಗಿಸಿದೆ.

ಮೃತರನ್ನು ಶ್ರೀನಿವಾಸ್ (40) ಹಾಗೂ ಅವರ ಮಕ್ಕಳಾದ ಚೇತನ್ (13) ಮತ್ತು ರಾಜೇಶ್ (8) ಎಂದು ಗುರುತಿಸಲಾಗಿದೆ. ಮಾಸ್ತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪ್ರಕರಣ ದಾಖಲಾಗಿದೆ.

ಭಾನುವಾರ ರಜಾದಿನವಾಗಿದ್ದರಿಂದ ತಂದೆ ಶ್ರೀನಿವಾಸ್ ತಮ್ಮಿಬ್ಬರು ಮಕ್ಕಳಿಗೆ ಈಜು ಕಲಿಸಿಕೊಡಲು ಕರೆದುಕೊಂಡು ಹೋಗಿದ್ದರು ಎನ್ನಲಾಗಿದೆ. ಗ್ರಾಮದ ಭೈರಪ್ಪ ಎಂಬುವರಿಗೆ ಸೇರಿದ ಕೃಷಿ ಹೊಂಡದ ಬಳಿ ತೆರಳಿದ್ದ ವೇಳೆ ದುರಂತ ಸಂಭವಿಸಿದೆ.

ಘಟನೆ ತಿಳಿಯುತ್ತಿದ್ದಂತೆ ಮಾಸ್ತಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಬಳಿಕ ಕುಟುಂಬಸ್ಥರಿಗೆ ಹಸ್ತಾಂತರಿಸಲಾಗುತ್ತದೆ.

ಒಂದೇ ಕುಟುಂಬದ ಮೂವರು ಸಾವನ್ನಪ್ಪಿರುವುದು ಗ್ರಾಮದಲ್ಲಿ ಆಕ್ರಂದನ ಮೂಡಿಸಿದ್ದು, ಕುಟುಂಬಸ್ಥರ ರೋದನ ಮನಕಲು ಕುವಂತಿತ್ತು. ಕೃಷಿ ಹೊಂಡಗಳ ಬಳಿ ಸುರಕ್ಷತಾ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಕಾಡಿನಲ್ಲಿ ಅಕ್ರಮವಾಗಿ ಚರ್ಚ್ ನಿರ್ಮಾಣ ಉದ್ಘಾಟನೆಗೆ ಆಗಮಿಸಿದ್ದವರು ವಶಕ್ಕೆ

**ಕೊಡಗು:** ಜಿಲ್ಲೆಯ ನಾಕೂರು ಶಿರಂಗಾಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೇರೂರಿನ ಕಾಡಿನಲ್ಲಿ ಅಕ್ರಮವಾಗಿ ನಿರ್ಮಿಸಲಾದ ಚರ್ಚ್ ಉದ್ಘಾಟನೆಗೆ ತಮಿಳುನಾಡಿನಿಂದ ಬಂದಿದ್ದ 40ಕ್ಕೂ ಹೆಚ್ಚು ಜನರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಗ್ರಾಮ ಪಂಚಾಯಿತಿ ಅನುಮತಿ ಪಡೆಯದೇ ಕಟ್ಟಡ ನಿರ್ಮಿಸಿರುವುದು ಪರಿಶೀಲನೆ ವೇಳೆ ಬೆಳಕಿಗೆ ಬಂದಿದೆ. ಸ್ಥಳೀಯರು ಕಾರ್ಯಕ್ರಮಕ್ಕೆ ವಿರೋಧ ವ್ಯಕ್ತಪಡಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದರು.

ಸ್ಥಳಕ್ಕೆ ಕುಶಾಲನಗರ ವೃತ್ತ ನಿರೀಕ್ಷಕ ಪ್ರದೀಪ್ ಹಾಗೂ ಸುಂಟಿಕೊಪ್ಪ ಪೊಲೀಸರು ಭೇಟಿ ನೀಡಿ ಪರಿಸ್ಥಿತಿ ನಿಯಂತ್ರಿಸಿದರು. ಬಳಿಕ ತಮಿಳುನಾಡು ಮೂಲದವರನ್ನು ವಾಹನ ಸಮೇತ ಠಾಣೆಗೆ ಕರೆದೊಯ್ದು ವಿಚಾರಣೆ ನಡೆಸಲಾಗಿದೆ.

# ಮಗಳ ಪ್ರೀತಿಗೆ ತಂದೆಯೇ ವಿರೋಧಿ; ಕೊಲೆ ಶಂಕೆ



ಮೇಘನಾ
ಮೃತ ಯುವತಿ



ತಿಮ್ಮರಾಯಪ್ಪ
ಆರೋಪಿ

ತುಮಕೂರು: ಪ್ರೀತಿಸಿದ ಯುವಕನ ಜೊತೆ ಸಂಬಂಧ ಮುಂದುವರಿಸಿದ್ದ ಕಾರಣಕ್ಕೆ ಯುವತಿಯನ್ನು ತಂದೆಯೇ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿರುವ ಘಟನೆ ತುಮಕೂರು ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಈ ಪ್ರಕರಣ ಇದೀಗ ರಾಜ್ಯಾದ್ಯಂತ ಆಕ್ರೋಶಕ್ಕೆ ಕಾರಣವಾಗಿದ್ದು, ಪೊಲೀಸರು ಆರೋಪಿಯಾದ ತಂದೆಯನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

ಮೃತ ಯುವತಿ ಕಳೆದ ಕೆಲವು ವರ್ಷಗಳಿಂದ ಯುವಕ ನೊಬ್ಬನನ್ನು ಪ್ರೀತಿಸುತ್ತಿದ್ದಳು ಎನ್ನಲಾಗಿದೆ. ಆದರೆ ಈ ಸಂಬಂಧಕ್ಕೆ ಕುಟುಂಬದವರು ತೀವ್ರ ವಿರೋಧ ವ್ಯಕ್ತಪಡಿಸಿದ್ದರು. ವಿಶೇಷವಾಗಿ ತಂದೆ, ಕುಟುಂಬದ ಮಾನ–ಗೌರವ ಹಾಳಾಗುತ್ತದೆ ಎಂದು ಹೇಳಿ ಸಂಬಂಧ ಮುರಿಯುವಂತೆ ಮಗಳಿಗೆ ಒತ್ತಡ ಹಾಕುತ್ತಿದ್ದ ಎನ್ನಲಾಗಿದೆ.

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಯುವತಿ ತನ್ನ ಪ್ರೇಮ ಸಂಬಂಧ ಮುಂದುವರಿಸಲು ಹಠ ಹಿಡಿದಿದ್ದಳು. ಇದರಿಂದ ಮನೆಯಲ್ಲಿ ಪದೇಪದೇ ಜಗಳಗಳು ನಡೆಯುತ್ತಿದವು ಎಂದು ತಿಳಿದುಬಂದಿದೆ. ಘಟನೆ ನಡೆದ ದಿನವೂ ಇದೇ ವಿಚಾರಕ್ಕೆ ಸಂಬಂಧಿಸಿದಂತೆ ತೀವ್ರ ವಾಗ್ವಾದ ನಡೆದಿದ್ದು, ಬಳಿಕ ಯುವತಿ ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದಾಳೆ ಎಂದು ಮೂಲಗಳು ತಿಳಿಸಿವೆ.

ಆರಂಭದಲ್ಲಿ ಕುಟುಂ ಬದವರು ಇದು ಸಹಜ ಸಾವು ಎಂದು ಹೇಳಲು ಯತ್ನಿಸಿದ್ದರೆನ್ನಲಾಗಿದೆ. ಆದರೆ ಸ್ಥಳೀಯರಿಗೆ ಅನುಮಾನ ಮೂಡಿದ ಹಿನ್ನೆಲೆ ಪೊಲೀಸರಿಗೆ ಮಾಹಿತಿ ನೀಡಲಾಗಿತ್ತು. ತನಿಖೆ ಆರಂಭಿಸಿದ ಪೊಲೀಸರು ಯುವತಿಯ ಸಾವಿನಲ್ಲಿ ಹಲವು ಅನುಮಾನಾಸ್ಪದ ಅಂಶಗಳನ್ನು ಪತ್ತೆಹಚ್ಚಿದ್ದಾರೆ.

ಪೊಲೀಸರ ವಿಚಾರಣೆ ವೇಳೆ ಇದು ಮರ್ಯಾದೆ ಹತ್ಯೆ ಆಗಿರಬಹುದೆಂಬ ಶಂಕೆ ಗಟ್ಟಿಯಾಗಿದೆ. ಕುಟುಂಬದ ಮಾನ–ಗೌರವದ ಹೆಸರಿನಲ್ಲಿ ತಂದೆಯೇ ಕೃತ್ಯ ಎಸಗಿದ್ದಾನೆ ಎನ್ನುವ ಅನುಮಾನ ವ್ಯಕ್ತವಾಗಿದ್ದು, ಆರೋಪಿಯನ್ನು ಬಂಧಿಸಿ ವಿಚಾರಣೆ ಮುಂದುವರಿಸಲಾಗಿದೆ.

ಇತ್ತೀಚಿನ ವರ್ಷಗಳಲ್ಲಿ ಪ್ರೀತಿ, ಅಂತರ್ಜಾತಿ ವಿವಾಹ ಹಾಗೂ ಕುಟುಂಬದ ವಿರೋಧದ ಹಿನ್ನೆಲೆ ದೇಶದ ವಿವಿಧ ಭಾಗಗಳಲ್ಲಿ ಮರ್ಯಾದೆ ಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಕರ್ನಾಟಕದಲ್ಲೂ ಈ ಹಿಂದೆ ಹಲವು ಪ್ರಕರಣಗಳು ದಾಖಲಾಗಿದ್ದು, ಸಮಾಜದಲ್ಲಿ ಇನ್ನೂ ಹಳೆಯ ಮನೋಭಾವಗಳು ಜೀವಂತವಾಗಿರುವುದನ್ನು ತೋರಿಸುತ್ತಿವೆ.

ಘಟನೆ ಸಂಬಂಧ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದು, ಮರಣೋತ್ತರ ಪರೀಕ್ಷೆ ವರದಿ ಹಾಗೂ ಇತರೆ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ.

# ಐಪಿಎಲ್ ಟಿಕೆಟ್ ಹಗರಣ; ಅಧಿಕಾರಿಗಳ ವಿಚಾರಣೆ

**ನವದೆಹಲಿ:** ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯ ಮಧ್ಯೆ ಭಾರೀ ಟಿಕೆಟ್ ಹಗರಣ ಬಯಲಾಗಿದ್ದು, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಪಂದ್ಯಗಳ ಟಿಕೆಟ್‌ಗಳನ್ನು ಕಾಳಬಜಾರಿನಲ್ಲಿ ಬರೋಬ್ಬರಿ 80 ಸಾವಿರಕ್ಕೆ ಮಾರಾಟ ಮಾಡಲಾಗುತ್ತಿತ್ತು ಎಂಬ ಆರೋಪ ಕೇಳಿಬಂದಿದೆ. ಈ ಪ್ರಕರಣದಲ್ಲಿ ದೆಹಲಿ ಮತ್ತು ಜಿಲ್ಲಾ ಕ್ರಿಕೆಟ್ ಸಂಸ್ಥೆಯ ಅಧಿಕಾರಿಯೊಬ್ಬರ ಪಾತ್ರವೂ ಇರುವ ಶಂಕೆ ವ್ಯಕ್ತವಾಗಿದ್ದು, ದೆಹಲಿ ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ.

ಪೊಲೀಸರ ತನಿಖೆಯ ಪ್ರಕಾರ, ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ ಪಂದ್ಯಗಳ ವೇಳೆ ಉಚಿತವಾಗಿ ನೀಡಲಾಗುತ್ತಿದ್ದ ಪಾಸ್‌ಗಳು ಹಾಗೂ ಟಿಕೆಟ್‌ಗಳನ್ನು ಅಕ್ರಮವಾಗಿ ಕಾಳಬಜಾರಿನಲ್ಲಿ ಮಾರಾಟ ಮಾಡಲಾಗುತ್ತಿತ್ತು. ವಿಶೇಷವಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ವಿರಾಟ್ ಕೊಹ್ಲಿ ಭಾಗವಹಿಸಿದ್ದ ಪಂದ್ಯಗಳಿಗೆ ಭಾರೀ ಬೇಡಿಕೆ ಇದ್ದ ಕಾರಣ, ಒಂದೇ ಟಿಕೆಟ್‌ಗೆ 8 ಸಾವಿರದಿಂದ 80 ಸಾವಿರವರೆಗೆ ವಸೂಲಿ ಮಾಡಲಾಗುತ್ತಿತ್ತು ಎಂದು ವರದಿಯಾಗಿದೆ.

ದೆಹಲಿ ಪೊಲೀಸರ ಪ್ರಕಾರ, ಪ್ರತಿ ಪಂದ್ಯಕ್ಕೂ ಸುಮಾರು 1000 ರಿಂದ 1200 ಉಚಿತ ಪಾಸ್‌ಗಳು ಕಾಳಬಜಾರಿಗೆ ಹೋಗುತ್ತಿದ್ದವು. ಈ ಪಾಸ್‌ಗಳನ್ನು ಮಧ್ಯವರ್ತಿಗಳ ಮೂಲಕ ಅಭಿಮಾನಿಗಳಿಗೆ ಭಾರೀ ದರಕ್ಕೆ ಮಾರಾಟ ಮಾಡಲಾಗುತ್ತಿತ್ತು ಎನ್ನಲಾಗಿದೆ. ಅರುಣ್ ಜೇಟ್ಲಿ ಕ್ರೀಡಾಂಗಣ ಸಮೀಪದ ಪೆಟ್ರೋಲ್ ಬಂಕ್ ಸಿಬ್ಬಂದಿಯೊಬ್ಬ ಈ ಜಾಲದ ವಿತರಣೆ ವ್ಯವಸ್ಥೆಯನ್ನು ನೋಡಿಕೊಳ್ಳುತ್ತಿದ್ದ ಎಂಬ ಆರೋಪವೂ ಕೇಳಿಬಂದಿದೆ.

ಈ ಪ್ರಕರಣದಲ್ಲಿ ಇದುವರೆಗೆ ನಾಲ್ವರನ್ನು ಪೊಲೀಸರು ಬಂಧಿಸಿದ್ದು, ಹಲವು ಕ್ರಿಕೆಟ್ ಸಂಸ್ಥೆಯ ಅಧಿಕಾರಿಗಳನ್ನು ವಿಚಾರಣೆಗೆ ಒಳಪಡಿಸಲಾಗಿದೆ. ಬಂಧಿತ ಆರೋಪಿಗಳ ಮೊಬೈಲ್‌ಗಳನ್ನು ವಶಕ್ಕೆ ಪಡೆದು ಫರೆನ್ಸಿಕ್ ಪರೀಕ್ಷೆಗೆ ಕಳುಹಿಸಲಾಗಿದೆ. ಡಿಲೀಟ್ ಮಾಡಲಾದ ಚಾಟ್‌ಗಳು ಹಾಗೂ ಆನ್‌ಲೈನ್ ಹಣ ವರ್ಗಾವಣೆ ವಿವರಗಳ ಪರಿಶೀಲನೆ ನಡೆಯುತ್ತಿದೆ ಎಂದು ತಿಳಿದುಬಂದಿದೆ.

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯ ನಿಯಮಗಳ ಪ್ರಕಾರ, ಐಪಿಎಲ್ ಪಂದ್ಯಗಳಿಗೆ ಆತಿಥೇಯ ಕ್ರಿಕೆಟ್ ಸಂಸ್ಥೆಗಳಿಗೆ ಒಟ್ಟು ಕ್ರೀಡಾಂಗಣ ಸಾಮರ್ಥ್ಯದ 10 ರಿಂದ 15 ಶೇಕಡಾ ಉಚಿತ ಪಾಸ್‌ಗಳನ್ನು ನೀಡಲಾಗುತ್ತದೆ. ಈ ಪಾಸ್‌ಗಳನ್ನೇ ದುರುಪಯೋಗ ಪಡಿಸಿಕೊಂಡು ಕಾಳಬಜಾರ್ ನಡೆಸಲಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ.

ಈ ಹಗರಣ ಇದೀಗ ಐಪಿಎಲ್ ಆಡಳಿತದ ಮೇಲೂ ಪ್ರಶ್ನೆ ಎಬ್ಬಿಸಿದ್ದು, ಕ್ರಿಕೆಟ್ ಅಭಿಮಾನಿಗಳಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ವಿಶೇಷವಾಗಿ ವಿರಾಟ್ ಕೊಹ್ಲಿ ಪಂದ್ಯಗಳ ಟಿಕೆಟ್ ಪಡೆಯಲು ಸಾವಿರಾರು ಅಭಿಮಾನಿಗಳು ಪರದಾಡುತ್ತಿದ್ದ ಸಂದರ್ಭದಲ್ಲಿ ಕೆಲವರು ಲಕ್ಷಾಂತರ ರೂಪಾಯಿ ಗಳಿಸಿರುವುದು ದೊಡ್ಡ ಚರ್ಚೆಗೆ ಕಾರಣವಾಗಿದೆ.

# ಕೂದಲು, ರಬ್ಬರ್ ತಿನ್ನುತ್ತಿದ್ದ ಮಗು; ಹೊಟ್ಟೆಯಲ್ಲಿ 480 ಗ್ರಾಂ ರಾಶಿ ಪತ್ತೆ

**ಬೆಂಗಳೂರು:** ಸಿಲಿಕಾನ್ ಸಿಟಿಯ ಮೆಡಿಕವರ್ ಆಸ್ಪತ್ರೆಯ ವೈದ್ಯರು ಅತ್ಯಂತ ಅಪರೂಪದ ಮತ್ತು ಸಂಕೀರ್ಣ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸುವ ಮೂಲಕ ಎರಡು ವರ್ಷದ ಪುಟ್ಟ ಮಗುವಿಗೆ ಮರುಜೀವ ನೀಡಿದ್ದಾರೆ. ಮಗುವಿನ ಹೊಟ್ಟೆಯೊಳಗೆ ಸಂಗ್ರಹವಾಗಿದ್ದ ಬರೋಬ್ಬರಿ 480 ಗ್ರಾಂ ತೂಕದ ಕೂದಲಿನ ದೊಡ್ಡ ಗುಡ್ಡೆ ಹಾಗೂ ರಬ್ಬರ್ ಬ್ಯಾಂಡ್‌ಗಳನ್ನು ಲ್ಯಾಪರೋಸ್ಕೊಪಿಕ್ ಶಸ್ತ್ರಚಿಕಿತ್ಸೆಯ ಮೂಲಕ ಸುರಕ್ಷಿತವಾಗಿ ಹೊರತೆಗೆಯಲಾಗಿದೆ.

ವೈದ್ಯಕೀಯ ಕ್ಷೇತ್ರದಲ್ಲಿ ಆಹಾರವಲ್ಲದ ವಸ್ತುಗಳನ್ನು ತಿನ್ನುವ ವಿಚಿತ್ರ ಮಾನಸಿಕ ಹಾಗೂ ದೈಹಿಕ ಅಭ್ಯಾಸವನ್ನು "ಪೈಕಾ" ಎಂದು ಕರೆಯಲಾಗುತ್ತದೆ. ಈ ಎರಡು ವರ್ಷದ ಮಗುವಿಗೂ ಅತಿ ಚಿಕ್ಕ ವಯಸ್ಸಿನಲ್ಲೇ ಕೂದಲು, ರಬ್ಬರ್ ಬ್ಯಾಂಡ್‌ಗಳು, ಬಲೂನ್ ತುಂಡುಗಳು ಸೇರಿದಂತೆ ವಿವಿಧ ವಸ್ತುಗಳನ್ನು ತಿನ್ನುವ ಅಭ್ಯಾಸ ಬೆಳೆದಿತ್ತು. ಆರಂಭದಲ್ಲಿ ಪೋಷಕರು ಇದನ್ನು ಸಾಮಾನ್ಯ ಬಾಲ್ಯ ಚಟ ಎಂದು ಭಾವಿಸಿದ್ದರು. ಆದರೆ ದಿನೇದಿನೇ ಮಗು ಹೆಚ್ಚಿನ ಪ್ರಮಾಣದಲ್ಲಿ ಕೂದಲು ಮತ್ತು ಇತರ ವಸ್ತುಗಳನ್ನು ನುಂಗತೊಡಗಿತ್ತು.



ಹೀಗೆ ನಿರಂತರವಾಗಿ ನುಂಗಿದ ಕೂದಲು ಮಗುವಿನ ಹೊಟ್ಟೆಯೊಳಗೆ ಸಂಗ್ರಹವಾಗಿ ನಿಧಾನವಾಗಿ ದೊಡ್ಡ ಗುಡ್ಡೆಯಾಗಿ ಮಾರ್ಪಟ್ಟಿತ್ತು. ವೈದ್ಯರ ಪ್ರಕಾರ, ಈ ಕೂದಲಿನ ರಾಶಿ ಹೊಟ್ಟೆಯಿಂದ ಆರಂಭವಾಗಿ ಸಣ್ಣ ಕರಳಿನವರೆಗೂ ಹರಡಿಕೊಂಡಿತ್ತು. ವೈದ್ಯಕೀಯ ಭಾಷೆಯಲ್ಲಿ ಇದನ್ನು "ರಪುಂಜೆಲ್ ಸಿಂಡ್ರೋಮ್" ಎಂದು ಕರೆಯಲಾಗುತ್ತದೆ. ಇಷ್ಟು ಸಣ್ಣ ವಯಸ್ಸಿನ ಮಗುವಿನಲ್ಲಿ ಇಂತಹ ಪ್ರಕರಣ ಕಾಣಿಸಿಕೊಳ್ಳುವುದು ಅತ್ಯಂತ ಅಪರೂಪ ಎಂದು ವೈದ್ಯರು ತಿಳಿಸಿದ್ದಾರೆ.

ಕಳೆದ ಕೆಲವು ದಿನಗಳಿಂದ ಮಗು ತೀವ್ರ ಹೊಟ್ಟೆನೋವು, ನಿರಂತರ ವಾಂತಿ ಮತ್ತು ಆಹಾರ ಸೇವನೆ ಸಂಪೂರ್ಣವಾಗಿ ಕಡಿಮೆಯಾಗಿರುವ ಸಮಸ್ಯೆಯಿಂದ ಬಳಲುತ್ತಿತ್ತು. ಮಗು ಏನನ್ನೂ ತಿನ್ನದೆ ಅಸ್ವಸ್ಥವಾಗುತ್ತಿದ್ದುದನ್ನು ಗಮನಿಸಿದ ಪೋಷಕರು ಆತಂಕಗೊಂಡು ಮಗುವನ್ನು ಆಸ್ಪತ್ರೆಗೆ ದಾಖಲಿಸಿದ್ದರು.

ಆಸ್ಪತ್ರೆಯಲ್ಲಿ ವೈದ್ಯರು ಸ್ಕ್ಯಾನಿಂಗ್ ಹಾಗೂ ಇತರೆ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿದಾಗ, ಮಗುವಿನ ಹೊಟ್ಟೆ ಮತ್ತು ಕರಳಿನ ಭಾಗದಲ್ಲಿ ದೊಡ್ಡ ಪ್ರಮಾಣದ ತ್ಯಾಜ್ಯ ವಸ್ತುಗಳು ಹಾಗೂ ಕೂದಲಿನ ಗುಡ್ಡೆ ಸಂಗ್ರಹವಾಗಿರುವುದು ಪತ್ತೆಯಾಯಿತು. ಪರಿಸ್ಥಿತಿ ಗಂಭೀರವಾಗಿರುವುದನ್ನು ಅರಿತ ವೈದ್ಯರು ತಕ್ಷಣವೇ ಶಸ್ತ್ರಚಿಕಿತ್ಸೆ ನಡೆಸಲು ನಿರ್ಧರಿಸಿದರು.

ಮೆಡಿಕವರ್ ಆಸ್ಪತ್ರೆಯ ನಾಲ್ವರು ಪರಿಣಿತ ವೈದ್ಯರ ತಂಡ ಲ್ಯಾಪರೋಸ್ಕೊಪಿಕ್ ವಿಧಾನದಲ್ಲಿ ಶಸ್ತ್ರಚಿಕಿತ್ಸೆ ನಡೆಸಿತು. ಯಶಸ್ವಿ ಕಾರ್ಯಾಚರಣೆಯ ಮೂಲಕ 25 ಸೆಂಟಿಮೀಟರ್ ಉದ್ದ ಮತ್ತು ಸುಮಾರು 480 ಗ್ರಾಂ ತೂಕದ ಬೃಹತ್ ಕೂದಲಿನ ರಾಶಿಯನ್ನು ಹೊಟ್ಟೆಯಿಂದ ಹೊರತೆಗೆಯಲಾಯಿತು. ಜೊತೆಗೆ ರಬ್ಬರ್ ಬ್ಯಾಂಡ್‌ಗಳು ಮತ್ತು ಇತರ ವಸ್ತುಗಳನ್ನೂ ತೆಗೆದುಹಾಕಲಾಗಿದೆ.

ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದ್ದು, ಮಗು ಇದೀಗ ಅಪಾಯದಿಂದ ಪಾರಾಗಿ ಚೇತರಿಸಿಕೊಳ್ಳುತ್ತಿದೆ ಎಂದು ವೈದ್ಯರು ತಿಳಿಸಿದ್ದಾರೆ. ಇಂತಹ ಪ್ರಕರಣಗಳು ಮಕ್ಕಳಲ್ಲಿ ಅಪರೂಪವಾಗಿದ್ದರೂ, ಮಕ್ಕಳ ವರ್ತನೆ ಬಗ್ಗೆ ಪೋಷಕರು ಹೆಚ್ಚಿನ ಗಮನ ವಹಿಸಬೇಕು ಎಂದು ವೈದ್ಯರು ಸಲಹೆ ನೀಡಿದ್ದಾರೆ.

ಮಕ್ಕಳು ನಿರಂತರವಾಗಿ ಕೂದಲು, ಮಣ್ಣು, ರಬ್ಬರ್ ಅಥವಾ ಆಹಾರವಲ್ಲದ ವಸ್ತುಗಳನ್ನು ತಿನ್ನುವ ಅಭ್ಯಾಸ ತೋರಿಸಿದರೆ ಅದನ್ನು ನಿರ್ಲಕ್ಷಿಸಬಾರದು. ತಕ್ಷಣ ವೈದ್ಯಕೀಯ ಸಲಹೆ ಪಡೆಯುವುದು ಅತ್ಯಂತ ಮುಖ್ಯ ಎಂದು ತಜ್ಞರು ಎಚ್ಚರಿಸಿದ್ದಾರೆ.

# ದರ್ಶನ್ ಜೈಲು ಡೈರಿ; ಸುಪ್ರೀಂಕೋರ್ಟ್‌ಗೆ ಸಂಪೂರ್ಣ ವರದಿ



**ಬೆಂಗಳೂರು:** ರೇಣುಕಾ ಸ್ವಾಮಿ ಹತ್ಯೆ ಪ್ರಕರಣದಲ್ಲಿ ನ್ಯಾಯಾಂಗ ಬಂಧನದಲ್ಲಿ ರುವ ನಟ ದರ್ಶನ್ ಅವರಿಗೆ ಸುಪ್ರೀಂಕೋರ್ಟ್‌ನಲ್ಲಿ ಕೂಡ ಜಾಮೀನು ಸಿಗದೇ ಹಿನ್ನಡೆಯಾಗಿದೆ. ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ತಿರಸ್ಕರಿಸಿದ್ದು, ದರ್ಶನ್ ಇನ್ನೂ ಜೈಲಿನಲ್ಲೇ ಮುಂದುವರಿಯುವಂತಾಗಿದೆ.

ಜಾಮೀನು ಅರ್ಜಿಯಲ್ಲಿ ದರ್ಶನ್ ಪರ ವಕೀಲರು ಜೈಲಿನಲ್ಲಿನ ಅವ್ಯವಸ್ಥೆಗಳು, ಕುಟುಂಬದವರನ್ನು ಭೇಟಿ ಮಾಡಲು ಅವಕಾಶ ನೀಡಲಾಗುತ್ತಿಲ್ಲ ಹಾಗೂ ಭದ್ರತಾ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಿದ್ದರು. ಆದರೆ ಇದಕ್ಕೆ ಪ್ರತಿಯಾಗಿ ಜೈಲಧಿಕಾರಿಗಳು ದರ್ಶನ್‌ಗೆ ನೀಡಲಾಗಿರುವ ಸೌಲಭ್ಯಗಳ ಸಂಪೂರ್ಣ ವಿವರವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

ಜೈಲು ಡೈರಿಯ ಮಾಹಿತಿಯ ಪ್ರಕಾರ, ನಟ ದರ್ಶನ್ ಇದುವರೆಗೆ 70ಕ್ಕೂ ಹೆಚ್ಚು ಬಾರಿ ಕುಟುಂಬದವರನ್ನು ಭೇಟಿ ಮಾಡಿದ್ದಾರೆ. ಅಲ್ಲದೆ 28 ಬಾರಿ ತಮ್ಮ ವಕೀಲರನ್ನು ಭೇಟಿಯಾಗಿದ್ದಾರೆ. ಜೊತೆಗೆ ಜೈಲಿನಿಂದ 73 ಬಾರಿ ಫೋನ್ ಕರೆಗಳನ್ನು ಮಾಡಿರುವ ಮಾಹಿತಿ ಸಹ ಬಹಿರಂಗವಾಗಿದೆ.

ಜೈಲಧಿಕಾರಿಗಳ ಪ್ರಕಾರ, ದರ್ಶನ್‌ಗೆ ಇತರೆ ಕೈದಿಗಳಿಗೆ ನೀಡುವ ಎಲ್ಲಾ ಮೂಲಭೂತ ಸೌಲಭ್ಯಗಳ ಜೊತೆಗೆ ನ್ಯಾಯಾಲಯದ ಆದೇಶದಂತೆ ಹೆಚ್ಚುವರಿ ಬೆಡ್‌ಶೀಟ್, ಬಾಚಣಿಗೆ ಸೇರಿದಂತೆ ಅಗತ್ಯ ವಸ್ತುಗಳನ್ನು ಒದಗಿಸಲಾಗಿದೆ. ಎಫ್‌ಎಸ್‌ಎಸ್‌ಎಐ ನಿಯಮದಂತೆ ಊಟ ನೀಡಲಾಗುತ್ತಿದ್ದು, ಹೆಚ್ಚುವರಿಯಾಗಿ ಹಾಲು ಮತ್ತು ಮೊಟ್ಟೆ ಕೂಡ ನೀಡಲಾಗುತ್ತಿದೆ. ಸಂದರ್ಶಕರು ನೀಡುವ ಡ್ರೈಫ್ರೂಟ್ಸ್ ಮತ್ತು ಹಣ್ಣುಗಳನ್ನು ಸ್ವೀಕರಿಸಲು ಸಹ ಅನುಮತಿ ನೀಡಲಾಗಿದೆ ಎಂದು ಸುಪ್ರೀಂ ಕೋರ್ಟ್‌ಗೆ ಮಾಹಿತಿ ನೀ ಡಲಾಗಿದೆ.

ಇನ್ನೂ ಜೈಲಿನಲ್ಲಿರುವ ಇತರೆ ಕೈದಿಗಳಿಂದ ಜೀವ ಬೆದರಿಕೆ ಇದೆ ಎಂದು ದರ್ಶನ್ ಜಾಮೀನು ಅರ್ಜಿಯಲ್ಲಿ ಉಲ್ಲೇಖಿಸಿದ್ದರು. ಇದಕ್ಕೂ ಪ್ರತಿಯಾಗಿ ಜೈಲಧಿಕಾರಿಗಳು ದರ್ಶನ್ ಭದ್ರತೆಗೆ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಹಗಲಿನ ವೇಳೆ ಒಬ್ಬ ಸಹಾಯಕ ಜೈಲರ್ ಹಾಗೂ ಒಬ್ಬ ವಾರ್ಡನ್‌ರನ್ನು ಭದ್ರತೆಗೆ ನಿಯೋಜಿಸಲಾಗಿದ್ದು, ರಾತ್ರಿ ವೇಳೆ ಇಬ್ಬರು ಹೆಡ್ ವಾರ್ಡರ್‌ಗಳು ಕಾವಲು ನೋಡುತ್ತಿದ್ದಾರೆ. ಜೊತೆಗೆ ಇತರೆ ಕೈದಿಗಳು ಕಾರಿಡಾರ್‌ಗೆ ಬಾರದಂತೆ ವಿಶೇಷ ನಿಯಂತ್ರಣ ಹಾಕಲಾಗಿದ್ದು, ಬ್ಯಾರಕ್ ಮುಂಭಾಗದಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನೂ ಅಳವಡಿಸಲಾಗಿದೆ ಎಂದು ನ್ಯಾಯಾಲಯಕ್ಕೆ ಮಾಹಿತಿ ನೀಡಲಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಜಾಮೀನು ನಿರಾಕರಿಸಿರುವುದು ದರ್ಶನ್‌ಗೆ ದೊಡ್ಡ ಹಿನ್ನಡೆಯಾಗಿ ಪರಿಣಮಿಸಿದ್ದು, ಮುಂದಿನ ಕಾನೂನು ಹೋರಾಟದ ಮೇಲೆ ಅಭಿಮಾನಿಗಳ ಗಮನ ನೆಟ್ಟಿದೆ.

# ಮನಕಲುಕಿದ ಘಟನೆ; ಮಗನಿಗಾಗಿ ತಾಯಿಯ ತ್ಯಾಗ



**ಹುಬ್ಬಳ್ಳಿ:** ಕಿತ್ತು ತಿನ್ನುವ ಬಡತನ ಒಂದೆಡೆ, ಮಗನಿಗೆ ಬಂದಿರೋ ಮಹಾಮಾರಿ ರೋಗ ಮತ್ತೊಂದೆಡೆ. ಖಾಸಗಿ ಆಸ್ಪತ್ರೆಗೆ ಕೊಡಲು ಲಕ್ಷ ಲಕ್ಷ ಹಣವಿಲ್ಲದೇ ಹೆತ್ತ ತಾಯಿ ತನ್ನ ಕಿವಿಯೋಲೆಯನ್ನೇ ಮಾರಿ ಮಗನನ್ನ ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದಾರೆ. ಹುಬ್ಬಳ್ಳಿ ಕಿಮ್ಸ್‌ನಲ್ಲಿ ಕಣ್ಣೀರು ಹಾಕುತ್ತಾ ಪರದಾಟ ನಡೆಸಿರುವ ತಾಯಿಯನ್ನ ನೋಡಿದರೆ ಯಾರಿಗಾದರೂ ಕಣ್ಣಾಲಿಗಳು ಒದ್ದೆಯಾಗುವಂತೆ ಮಾಡುತ್ತವೆ. ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆ ಈ ಹೃದಯವಿದ್ರಾವಕ ಘಟನೆಗೆ ಸಾಕ್ಷಿಯಾಗಿದೆ.

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಹೂಲಿ ಗ್ರಾಮದ ಸುನಿತಾ ಕೆಂಚಪ್ಪನವರ್ ಎಂಬುವವರು ತನ್ನ ಮಗ ಸಾಗರ್‌ನ ಜೀವ ಉಳಿಸಲು ಹೋರಾಡುತ್ತಿದ್ದಾರೆ. 11 ವರ್ಷದ ಸಾಗರ್ ಹುಟ್ಟಿದಾಗಿನಿಂದ ಚೆನ್ನಾಗಿಯೇ ಇದ್ದ, ಆದರೆ ಇತ್ತೀಚೆಗೆ ರಕ್ತದ ಕೊರತೆಯಿಂದ ಅನಾರೋಗ್ಯಕ್ಕೆ ತುತ್ತಾಗಿದ್ದ. ವೈದ್ಯರ ಬಳಿ ತಪಾಸಣೆ ನಡೆಸಿದಾಗ ಬಾಲಕನಿಗೆ ಬೋನ್ ಮ್ಯಾರೋ ಟ್ರಾನ್ಸಪ್ಲೆಂಟ್ (ಮೂಳೆ ಮಜ್ಜೆ ಕಸಿ) ಸಮಸ್ಯೆ ಇರುವುದು ಬೆಳಕಿಗೆ ಬಂದಿದೆ.

**ಕಿವಿಯೋಲೆಯನ್ನೇ ಮಾರಿದ ತಾಯಿ :** ಬೆಂಗಳೂರಿನ ಇಂದಿರಾಗಾಂಧಿ ಆಸ್ಪತ್ರೆ, ಜೈನ್ ಆಸ್ಪತ್ರೆ ಸೇರಿದಂತೆ ಹಲವು ಸರ್ಕಾರಿ ಆಸ್ಪತ್ರೆಗಳಿಗೆ ತಾಯಿ ಸುನಿತಾ ಅಲೆದಾಡಿದ್ದಾರೆ. ಆದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಕಾಯಿಲೆಗೆ ಚಿಕಿತ್ಸೆ ಲಭ್ಯವಿಲ್ಲದ ಕಾರಣ ಖಾಸಗಿ ಆಸ್ಪತ್ರೆಗೆ ಕರೆದೊಯ್ಯುವಂತೆ ವೈದ್ಯರು ಸೂಚಿಸಿದ್ದಾರೆ. ಆದರೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಬರೋಬ್ಬರಿ 20 ರಿಂದ 26 ಲಕ್ಷ ರೂ ವೆಚ್ಚವಾಗುತ್ತದೆ ಎಂದು ಹೇಳಿದ್ದಾರೆ. ದಿನವಿಡೀ ಕೂಲಿ ಕೆಲಸ ಮಾಡಿ ಜೀವನ ನಡೆಸುವ ದಂಪತಿಗೆ ಅಷ್ಟೊಂದು ದೊಡ್ಡ ಮೊತ್ತ ಹೊಂದಿಸುವುದು ಅಸಾಧ್ಯದ ಮಾತಾಗಿದೆ.

ಸದ್ಯ ಆರೋಗ್ಯ ಭಾಗ್ಯ ಸಂಜೀವಿನಿ ಯೋಜನೆಯಡಿ ಮಗನಿಗೆ ಚಿಕಿತ್ಸೆಗೆ ಸರ್ಕಾರದಿಂದ ಮಂಜೂರಾತಿ ಸಿಕ್ಕಿದೆಯಾದರೂ, ಚಿಕಿತ್ಸೆ ಆರಂಭಿಸಲು ಕನಿಷ್ಠ 2 ಲಕ್ಷ ರೂ ಹಣದ ತುರ್ತು ಅವಶ್ಯಕತೆ ಇದೆ. ಈ ವೆಚ್ಚವನ್ನು ಭರಿಸಲು ತಾಯಿ ತನ್ನ ಕಿವಿಯೋಲೆಯನ್ನೇ ಮಾರಿ ಹುಬ್ಬಳ್ಳಿ ಕಿಮ್ಸ್‌ಗೆ ಮಗನನ್ನು ಕರೆದುಕೊಂಡು ಬಂದಿದ್ದಾರೆ.

**ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಹಣ ಕೊಡಿಸುವುದಾಗಿ ಡಾ. ನಾಗಲಕ್ಷ್ಮಿ ಚೌದರಿ ಭರವಸೆ:** ಹುಬ್ಬಳ್ಳಿ ಕಿಮ್ಸ್‌ಗೆ ಭೇಟಿ ನೀಡಿದ್ದ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌದರಿ ಮುಂದೆ ತಾಯಿ ಸುನಿತಾ ತನ್ನ ಕಣ್ಣೀರ ಕಥೆಯನ್ನು ಬಿಚ್ಚಿಟ್ಟಿದ್ದಾರೆ. ತಾಯಿಯ ಅಳಲನ್ನು ಕೇಳಿ ಮನಕರಗಿದ ನಾಗಲಕ್ಷ್ಮಿ ಚೌದರಿ, ಸದ್ಯ ಚಿಕಿತ್ಸೆ ಆರಂಭಿಸಲು ಬೇಕಾಗಿರುವ 2 ಲಕ್ಷ ರೂ ಹಣವನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಕೊಡಿಸುವ ಭರವಸೆ ನೀಡಿದ್ದಾರೆ.

ಬೋನ್ ಮ್ಯಾರೋ ಟ್ರಾನ್ಸಪ್ಲೆಂಟ್ ಸಮಸ್ಯೆ ಹೊಂದಿರುವ 11 ವರ್ಷದ ಬಾಲಕ ಸಾಗರ್, ಕಳೆದ ಕೆಲ ದಿನಗಳಿಂದ ಆಸ್ಪತ್ರೆಯಲ್ಲಿ ನರಳುತ್ತಿದ್ದಾನೆ. ಆತನನ್ನು ಬದುಕಿಸಲು ಹೆತ್ತವರು ಕಷ್ಟ ಪಡುತ್ತಿದ್ದಾರೆ. ಹೀಗಾಗಿ ಸರ್ಕಾರ ಚಿಕಿತ್ಸೆಗೆ ಅಗತ್ಯ ನೆರವು ನೀಡಿ, ಬಾಲಕನ ಜೀವ ಉಳಿಸುವ ಕೆಲಸ ಮಾಡಬೇಕಿದೆ.

# ವಿವಾದದ ನಡುವೆಯೂ ರಾಷ್ಟ್ರಪತಿ ಭವನದಲ್ಲಿ 'ಆಖ್ರಿ ಸವಾಲ್' ವಿಶೇಷ ಪ್ರದರ್ಶನ?




**ಮುಂಬೈ:** ಬಾಲಿವುಡ್‌ನ ಹಿರಿಯ ನಟ ಸಂಜಯ್ ದತ್ ಅಭಿನಯದ ಬಹುಚರ್ಚಿತ 'ಆಖ್ರಿ ಸವಾಲ್' ಸಿನಿಮಾ ಇದೀಗ ಹೊಸ ವಿವಾದ ಮತ್ತು ಕುತೂಹಲದ ಕೇಂದ್ರಬಿಂದುವಾಗಿದೆ. ಚಿತ್ರ ಬಿಡುಗಡೆಗೂ ಮುನ್ನವೇ ದೇಶ-ವಿದೇಶಗಳಲ್ಲಿ ಭಾರೀ ಚರ್ಚೆಗೆ ಕಾರಣವಾಗಿರುವ ಈ ಸಿನಿಮಾಗೆ ಸಂಬಂಧಿಸಿದಂತೆ ಮತ್ತೊಂದು ದೊಡ್ಡ ಬೆಳವಣಿಗೆ ಬೆಳಕಿಗೆ ಬಂದಿದೆ. ರಾಷ್ಟ್ರಪತಿ ಭವನದಲ್ಲಿ ಈ ಚಿತ್ರದ ವಿಶೇಷ ಪ್ರದರ್ಶನವನ್ನು ಆಯೋಜಿಸಲು ಸಿದ್ಧತೆ ನಡೆಯುತ್ತಿದೆ ಎಂಬ ಸುದ್ದಿ ಇದೀಗ ಚಿತ್ರರಂಗ ಮತ್ತು ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ.

ಕಳೆದ ಕೆಲವು ದಿನಗಳಿಂದ 'ಆಖ್ರಿ ಸವಾಲ್' ಸಿನಿಮಾ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡುತ್ತಿದೆ. ಚಿತ್ರದ ಕಥಾವಸ್ತು, ರಾಜಕೀಯ ಸ್ಪರ್ಶ ಹೊಂದಿರುವ ಸಂಭಾಷಣೆಗಳು ಹಾಗೂ ಕೆಲವು ವಿವಾದಾತ್ಮಕ ದೃಶ್ಯಗಳು ಸಾರ್ವಜನಿಕ ಚರ್ಚೆಗೆ ಕಾರಣವಾಗಿವೆ. ಇದೇ ವೇಳೆ ಯುನೈಟೆಡ್ ಅರಬ್ ಎಮಿರೇಟ್ಸ್‌ನಲ್ಲಿ ಚಿತ್ರಕ್ಕೆ ನಿಷೇಧ ಹೇರಲಾಗಿದೆ ಎಂಬ ವರದಿಗಳು ಹೊರಬಿದ್ದಿದ್ದವು. ಅದರ ಬೆನ್ನಲ್ಲೇ ಭಾರತದಲ್ಲೂ ಚಿತ್ರದ ವಿರುದ್ಧ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿದೆ ಎನ್ನಲಾಗಿದ್ದು, ಸಿನಿಮಾ ಮತ್ತಷ್ಟು ವಿವಾದದ ಸುಳಿಯಲ್ಲಿ ಸಿಲುಕಿದೆ.

ಆದರೆ ಇಷ್ಟೆಲ್ಲ ವಿವಾದಗಳ ನಡುವೆಯೂ ಚಿತ್ರತಂಡ ಸಿನಿಮಾದ ಪ್ರಚಾರವನ್ನು ಭರ್ಜರಿಯಾಗಿ ಮುಂದುವರಿಸಿದೆ. ಇದೀಗ ರಾಷ್ಟ್ರಪತಿ ಭವನದಲ್ಲಿ ವಿಶೇಷ ಪ್ರದರ್ಶನ ನಡೆಯಲಿದೆ ಎಂಬ ಮಾಹಿತಿ ಬಹಿರಂಗವಾಗಿದ್ದು, ಚಿತ್ರದ ಬಗ್ಗೆ ಹೊಸ ಮಟ್ಟದ ಕುತೂಹಲ ಹುಟ್ಟಿಸಿದೆ.

ಮೂಲಗಳ ಪ್ರಕಾರ, ಕಳೆದ ಕೆಲವು ದಿನಗಳಿಂದ ಈ ವಿಶೇಷ ಪ್ರದರ್ಶನಕ್ಕಾಗಿ ಗುಪ್ತವಾಗಿ ಸಿದ್ಧತೆಗಳು ನಡೆಯುತ್ತಿವೆ ಎನ್ನಲಾಗಿದೆ. ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ಗಣ್ಯರು, ಆಹ್ವಾನಿತ ಅತಿಥಿಗಳು ಹಾಗೂ ಪ್ರದರ್ಶನದ ನಿಖರ ದಿನಾಂಕವನ್ನು ಸದ್ಯಕ್ಕೆ ಬಹಿರಂಗ ಪಡಿಸಲಾಗಿಲ್ಲ. ಎಲ್ಲ ಮಾಹಿತಿಯನ್ನೂ ಅತ್ಯಂತ ಗೌಪ್ಯವಾ ಗಿಡಲಾಗಿದೆ ಎಂದು ತಿಳಿದುಬಂದಿದೆ.

'ಆಖ್ರಿ ಸವಾಲ್' ಸಿನಿಮಾ ಒಂದು ಗಂಭೀರ ಸಾಮಾಜಿಕ ಮತ್ತು ರಾಜಕೀಯ ವಿಷಯವನ್ನು ಆಧರಿಸಿದೆ ಎಂದು ಹೇಳಲಾಗುತ್ತಿದೆ. ಸಂಜಯ್ ದತ್ ಜೊತೆ ಹಲವಾರು ಖ್ಯಾತ ನಟರು ಚಿತ್ರದಲ್ಲಿ ಅಭಿನಯಿಸಿದ್ದು, ಈಗಾಗಲೇ ಬಿಡುಗಡೆಯಾದ ಟೀಸರ್ ಮತ್ತು ಪೋಸ್ಟರ್‌ಗಳು ಪ್ರೇಕ್ಷಕರ ಗಮನ ಸೆಳೆದಿವೆ. ವಿಶೇಷವಾಗಿ ಚಿತ್ರದ ರಾಜಕೀಯ ಹಿನ್ನೆಲೆ ಮತ್ತು ತೀಕ್ಷ್ಣ ಸಂಭಾಷಣೆಗಳೇ ವಿವಾದಕ್ಕೆ ಪ್ರಮುಖ ಕಾರಣ ಎಂದು ಸಿನಿ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

ಚಿತ್ರರಂಗದ ವಲಯದಲ್ಲಿ ರಾಷ್ಟ್ರಪತಿ ಭವನದ ವಿಶೇಷ ಪ್ರದರ್ಶನವನ್ನು ಮಹತ್ವದ ಬೆಳವಣಿಗೆ ಎಂದು ಪರಿಗಣಿಸ ಲಾಗುತ್ತಿದೆ. ಸಾಮಾನ್ಯವಾಗಿ ರಾಷ್ಟ್ರೀಯ ಮಹತ್ವದ ಅಥವಾ ವಿಶೇಷ ಸಾಮಾಜಿಕ ಸಂದೇಶ ಹೊಂದಿರುವ ಸಿನಿಮಾಗಳಿಗೆ ಮಾತ್ರ ಇಂತಹ ವೇದಿಕೆ ಸಿಗುತ್ತದೆ. ಹೀಗಾಗಿ 'ಆಖ್ರಿ ಸವಾಲ್' ಚಿತ್ರಕ್ಕೂ ರಾಷ್ಟ್ರಮಟ್ಟದ ಗಮನ ಸಿಗುತ್ತಿದೆ ಎಂಬ ಚರ್ಚೆ ಜೋರಾಗಿದೆ.

ಒಂದೆಡೆ ವಿದೇಶದಲ್ಲಿ ಬ್ಯಾನ್, ಮತ್ತೊಂದೆಡೆ ದೇಶೀಯ ಮಟ್ಟದಲ್ಲಿ ಕಾನೂನು ಹೋರಾಟ ಎದುರಿಸುತ್ತಿದ್ದರೂ, ರಾಷ್ಟ್ರಪತಿ ಭವನದ ಪ್ರದರ್ಶನದ ಸುದ್ದಿ ಚಿತ್ರದ ಮೇಲೆ ಜನರ ಕುತೂಹಲವನ್ನು ಇನ್ನಷ್ಟು ಹೆಚ್ಚಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ ಚಿತ್ರದ ಬಗ್ಗೆ ಭಾರಿ ಚರ್ಚೆ ನಡೆಯುತ್ತಿದ್ದು, ಕೆಲವರು ಬೆಂಬಲ ವ್ಯಕ್ತಪಡಿಸುತ್ತಿದ್ದರೆ, ಮತ್ತಷ್ಟು ಮಂದಿ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಈ ನಡುವೆ ಯುಎಇ ನಿಷೇಧ ಮತ್ತು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕುರಿತ ವಿವಾದಗಳಿಗೆ ಚಿತ್ರತಂಡ ಇನ್ನೂ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಆದರೆ ಎಲ್ಲಾ ವಿವಾದಗಳ ನಡುವೆಯೂ 'ಆಖ್ರಿ ಸವಾಲ್' ಸಿನಿಮಾ ಬಿಡುಗಡೆಯ ಮುನ್ನವೇ ದೇಶಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿರುವುದು ಮಾತ್ರ ನಿಜ.

# ಕ್ರಿಕೆಟ್ ಅಭಿಮಾನಿಗಳಿಗೆ ಬಿಗ್ ಶಾಕ್ ಆರ್‌ಸಿಬಿ ಎಸ್‌ಆರ್‌ಹೆಚ್ ಪಂದ್ಯದ ಟಿಕೆಟ್ ಬೆಲೆ ಹೆಚ್ಚಳ




**ಹೈದರಾಬಾದ್:** ಇಂಡಿಯನ್ ಪ್ರೀಮಿಯರ್ ಲೀಗ್ 2026ರ ಅತ್ಯಂತ ನಿರೀಕ್ಷಿತ ಪಂದ್ಯಗಳಲ್ಲಿ ಒಂದಾದ ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯಕ್ಕೆ ಟಿಕೆಟ್ ದರದಲ್ಲಿ ಭಾರೀ ಏರಿಕೆ ಮಾಡಲಾಗಿದೆ. ಮೇ 22ರಂದು ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಈ ಪಂದ್ಯಕ್ಕೆ ಟಿಕೆಟ್ ಬೆಲೆಗಳನ್ನು ಶೇಕಡಾ 50 ರಿಂದ 110ರಷ್ಟು ಹೆಚ್ಚಳ ಮಾಡಿದ್ದು, ಇದು ಅಭಿಮಾನಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ಈ ಪಂದ್ಯ ಐಪಿಎಲ್ ಲೀಗ್ ಹಂತದ ಕೊನೆಯ ಹಾಗೂ ಅತ್ಯಂತ ಮಹತ್ವದ ಪಂದ್ಯವಾಗಿದ್ದು, ಅಂಕಪಟ್ಟಿಯ ಎರಡು ಸ್ಥಾನಗಳ ಲೆಕ್ಕಾಚಾರವನ್ನು ನಿರ್ಧರಿಸುವ ಸಾಧ್ಯತೆ ಇದೆ. ಹೀಗಾಗಿ ಪಂದ್ಯಕ್ಕೆ ಅಭಿಮಾನಿಗಳಿಂದ ಭಾರೀ ಬೇಡಿಕೆ ಉಂಟಾಗಿದೆ. ಗಿವಿರಾಟ್ ಕೊಹ್ಲಿ ಅವರ ಜನಪ್ರಿಯತೆ ಟಿಕೆಟ್ ಬೇಡಿಕೆಯನ್ನು ಮತ್ತಷ್ಟು ಹೆಚ್ಚಿಸಿದೆ.

ಟೆಸ್ಟ್ ಹಾಗೂ ಟಿ20 ಅಂತರ ರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿರುವ ಕೊಹ್ಲಿ ಇದೀಗ ಐಪಿಎಲ್‌ನಲ್ಲಿ ಮಾತ್ರ ಕಾಣಿಸಿಕೊಳ್ಳುತ್ತಿರುವುದರಿಂದ, ಅವರನ್ನು ನೇರವಾಗಿ ನೋಡುವ ಅವಕಾಶ ಅಭಿಮಾನಿಗಳಿಗೆ ಅಪರೂಪವಾಗಿದೆ. ಇದೇ ಕಾರಣದಿಂದ ಖಖಊ ಫ್ರಾಂಚೈಸ್ ಈ ಪಂದ್ಯವನ್ನು 'ಪ್ರೀಮಿಯಂ ಇವೆಂಟ್' ಆಗಿ ಪರಿಗಣಿಸಿ ಟಿಕೆಟ್ ದರವನ್ನು ಗಣನೀಯವಾಗಿ ಹೆಚ್ಚಿಸಿದೆ ಎನ್ನಲಾಗಿದೆ.

ಸಾಮಾನ್ಯವಾಗಿ ರೂ.900 ದರ ಹೊಂದಿದ್ದ ಮೇಲ್ ಶ್ರೇಣಿಯ ಸ್ಟ್ಯಾಂಡ್ ಟಿಕೆಟ್‌ಗಳು ಈಗ ರೂ.2000ಕ್ಕೆ ಏರಿಕೆಯಾಗಿದೆ. ಸೌತ್ ಫಸ್ಟ್ ಟೆರೇಸ್ ವಿಭಾಗದ ಟಿಕೆಟ್‌ಗಳು ರೂ.1500ರಿಂದ ನೇರವಾಗಿ ರೂ.3000ಕ್ಕೆ ಏರಿಕೆ ಕಂಡಿವೆ. ಮಧ್ಯಮ ಹಂತದ ಸಾಮಾನ್ಯ ಸ್ಟ್ಯಾಂಡ್‌ಗಳ ಟಿಕೆಟ್‌ಗಳು ರೂ.1910ರಿಂದ ರೂ.3500ಕ್ಕೆ ಹೆಚ್ಚಳಗೊಂಡಿದ್ದು, ಪ್ರೀಮಿಯಂ ಸ್ಟ್ಯಾಂಡ್ ಗಳ ದರ ರೂ. 2500ರಿಂದ ರೂ.4500ಕ್ಕೆ ತಲುಪಿದೆ.

ಅಷ್ಟೇ ಅಲ್ಲದೆ, ಕಾರ್ಪೊರೇಟ್ ಹಾಸ್ಪಿಟಾಲಿಟಿ ಬಾಕ್ಸ್‌ಗಳ ದರ ಕೂಡ ರೂ.30,000ರಿಂದ ರೂ.45,000ಕ್ಕೆ ಏರಿಕೆ ಯಾಗಿದೆ. ಅಂದರೆ ಈ ವಿಭಾಗದಲ್ಲಿಯೂ ಶೇಕಡಾ 50ರಷ್ಟು ಹೆಚ್ಚಳ ಮಾಡಲಾಗಿದೆ.

ಈ ಟಿಕೆಟ್ ಮಾರಾಟವನ್ನು ಅಧಿಕೃತವಾಗಿ ಡಿಸ್ಟ್ರಿಕ್ಟ್ ಬೈ ಜೊಮೆಟೊ ಮೂಲಕ ನಡೆಸಲಾಗಿದ್ದು, ಎಲ್ಲಾ ಟಿಕೆಟ್‌ಗಳು ಕೆಲವೇ ಗಂಟೆಗಳಲ್ಲಿ ಮಾರಾಟವಾಗಿವೆ. ವರದಿಗಳ ಪ್ರಕಾರ, 2.16 ಲಕ್ಷಕ್ಕೂ ಹೆಚ್ಚು ಜನರು ಆನ್‌ಲೈನ್ ಸರದಿಯಲ್ಲಿ ನಿಂತಿದ್ದರೂ ಬಹುತೇಕ ಅಭಿಮಾನಿಗಳಿಗೆ ಟಿಕೆಟ್ ಸಿಗಲಿಲ್ಲ.

ಇತ್ತೀಚೆಗೆ ಪಂದ್ಯಗಳ ಟಿಕೆಟ್‌ಗಳನ್ನು ಕಪ್ಪು ಮಾರುಕಟ್ಟೆಯಲ್ಲಿ ದುಬಾರಿ ಬೆಲೆಗೆ ಮಾರಾಟ ಮಾಡುತ್ತಿದ್ದ ಘಟನೆಗಳು ಬೆಳಕಿಗೆ ಬಂದಿದ್ದವು. ಆದರೆ ಎಸ್ ಆರ್ ಹೆಚ್ ಫ್ರಾಂಚೈಸ್ ಇದೀಗ ಅಧಿಕೃತವಾಗಿಯೇ 'ಡೈನಾಮಿಕ್ ಪ್ರೈಸಿಂಗ್' ಮಾದರಿಯನ್ನು ಅನುಸರಿಸುವುದು ಹೊಸ ಚರ್ಚೆಗೆ ಕಾರಣವಾಗಿದೆ. ಬೇಡಿಕೆ ಹೆಚ್ಚಿದಂತೆ ಟಿಕೆಟ್ ದರವನ್ನು ಹೆಚ್ಚಿಸುವ ಕ್ರಮವನ್ನು ಕಾರ್ಪೊರೇಟ್ ಕಂಪನಿಗಳು ಸಾಮಾನ್ಯವಾಗಿ ಬಳಸುತ್ತವೆ. ಆದರೆ ಕ್ರೀಡಾಭಿಮಾನಿಗಳ ದೃಷ್ಟಿಯಲ್ಲಿ ಇದು ಮಧ್ಯಮ ವರ್ಗದ ಜನರಿಗೆ ಹೊರೆ ತಂದಿದೆ.

ಹಲವು ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಅಸಮಾಧಾನ ಹೊರಹಾಕಿದ್ದು, "ಐಪಿಎಲ್ ಈಗ ಸಾಮಾನ್ಯ ಅಭಿಮಾನಿಗಳ ಕೈಗೆಟುಕದ ಮನರಂಜನೆ ಯಾಗಿದೆ" ಎಂದು ಟೀಕಿಸಿದ್ದಾರೆ. ವಿಶೇಷವಾಗಿ ಕುಟುಂಬ ಸಮೇತ ಪಂದ್ಯ ವೀಕ್ಷಿಸಲು ಹೋಗುವವರಿಗೆ ಈ ದರ ಏರಿಕೆ ದೊಡ್ಡ ಹೊರೆ ಆಗಲಿದೆ.

# “ನಾನು ಅಷ್ಟು ಚೀಪ್ ಅಲ್ಲ”; ಸಿಎಂ ವಿಜಯ್ ಬಗ್ಗೆ ರಜನಿಕಾಂತ್ ಸ್ಪಷ್ಟನೆ

ತಮಿಳುನಾಡು ವಿಧಾನಸಭಾ ಚುನಾವಣೆ ಯಲ್ಲಿ ನಟ ವಿಜಯ್ ಅವರ 'ತಮಿಳಗ ವೆಟ್ರಿ ಕಳಗಂ' ಪಕ್ಷ ಬಹುಮತ ಪಡೆದು ಸರ್ಕಾರ ರಚಿಸಿದ ಬೆನ್ನಲ್ಲೇ, ಸೂಪರ್‌ಸ್ಟಾರ್ ರಜನಿಕಾಂತ್ ಅವರ ನಡೆ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗಳು ನಡೆಯುತ್ತಿದ್ದವು. ಚುನಾವಣೆಯಲ್ಲಿ ಸೋಲುಂಡ ಡಿಎಂಕೆ ಮುಖ್ಯಸ್ಥ ಎಂ.ಕೆ. ಸ್ಟಾಲಿನ್ ಅವರನ್ನು ರಜನಿಕಾಂತ್ ಭೇಟಿಯಾಗಿದ್ದನ್ನು ನೋಡಿ ಕೆಲವರು ಟೀಕೆ ಮಾಡಿದ್ದರು. ವಿಜಯ್ ಸಿಎಂ ಆಗಿರುವುದಕ್ಕೆ ರಜನಿ ಅವರಿಗೆ ಇಷ್ಟವಿಲ್ಲ ಎಂದು ಹಲವರು ಬಿಂಬಿಸಿದ್ದರು. ಸದ್ಯ ಈ ಎಲ್ಲಾ ವದಂತಿಗಳಿಗೆ ರಜನಿಕಾಂತ್ ಸುದ್ದಿಗೋಷ್ಠಿ ಕರೆದು ಸ್ಪಷ್ಟನೆ ನೀಡಿದ್ದಾರೆ.

ಚೆನ್ನೈನ ಪೋಯಿಸ್ ಗಾರ್ಡನ್ ನಲ್ಲಿರುವ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರಜನಿಕಾಂತ್, 'ಚುನಾವಣೆಯ ನಂತರ ನನ್ನ ಬಗ್ಗೆ ಹಲವು ವದಂತಿಗಳು ಹರಿದಾಡುತ್ತಿವೆ. ನಾನು ಈಗ ಪ್ರತಿಕ್ರಿಯಿಸದಿದ್ದರೆ ಆ ಸುಳ್ಳುಗಳೇ ನಿಜವಾಗಿಬಿಡುತ್ತವೆ. ಚುನಾವಣಾ ಫಲಿತಾಂಶದ ನಂತರ ನಾನು ಎಂ.ಕೆ. ಸ್ಟಾಲಿನ್ ಅವರನ್ನು ಭೇಟಿಯಾಗಿದ್ದನ್ನು ಟೀಕಿಸ ಲಾಗುತ್ತಿದೆ. ಆದರೆ ನಮ್ಮ ಸ್ನೇಹ ರಾಜಕೀಯಕ್ಕೂ ಮೀರಿದ್ದು. ಸ್ಟಾಲಿನ್ ಸೋತಿದ್ದಕ್ಕೆ ನನಗೆ ಬೇಸರವಾಗಿತ್ತು, ಹಾಗಾಗಿ ಒಬ್ಬ ಸ್ನೇಹಿತನಾಗಿ ಅವರನ್ನು ಭೇಟಿಯಾಗಿದ್ದೆ' ಎಂದು ವಿವರಿಸಿದರು.


ನಟ ವಿಜಯ್ ಸಿಎಂ ಆಗಿದ್ದಕ್ಕೆ ರಜನಿಕಾಂತ್ ಅಸೂಯೆ ಪಡುತ್ತಿದ್ದಾರೆ ಮತ್ತು ಅವರಿಗೆ ಶುಭ ಕೋರಿಲ್ಲ ಎಂಬ ಆರೋಪಗಳಿಗೆ ಉತ್ತರಿಸಿದ ಅವರು, 'ವಿಜಯ್ ಸಿಎಂ ಆದ ಸುದ್ದಿ ಕೇಳಿ ನನಗೆ ಭಾರಿ ಆಶ್ಚರ್ಯ ಮತ್ತು ಅಪಾರ ಸಂತೋಷವಾಯಿತು. ಅವರು ಗೆಲ್ಲುತ್ತಲೇ ನಾನು ಎಕ್ಸ್ (ಟ್ವಿಟರ್) ಖಾತೆಯ ಮೂಲಕ ಶುಭ ಹಾರೈಸಿದ್ದೆ. ನಾನು ರಾಜಕೀಯದಲ್ಲೇ ಇಲ್ಲದಿರುವಾಗ ನನಗೆ ವಿಜಯ್ ಮೇಲೆ ಏಕೆ ಅಸೂಯೆ ಇರುತ್ತದೆ? ಒಂದು ವೇಳೆ ನನ್ನ ಸಮಕಾಲೀನರಾದ ಕಮಲ್ ಹಾಸನ್ ಸಿಎಂ ಆಗಿದ್ದರೆ ನನಗೆ ಒಂದು ಚೂರು ಅಸೂಯೆ ಆಗಬಹುದಿತ್ತೇನೋ. ವಿಜಯ್‌ಗೂ ನನಗೂ 25 ವರ್ಷಗಳ ತಲೆಮಾರಿನ ಅಂತರವಿದೆ, ನಮ್ಮಿಬ್ಬರ ನಡುವೆ ಸ್ಪರ್ಧೆ ಎಲ್ಲಿಂದ ಬರುತ್ತದೆ?' ಎಂದು ಪ್ರಶ್ನಿಸಿದರು.

ಮುಂದುವರಿದು ಮಾತನಾಡಿದ ರಜನಿಕಾಂತ್, 'ಅನಗತ್ಯವಾಗಿ ಮಾತನಾಡಲು ರಜನಿ ಅಷ್ಟು ಕೀಳು



ಮಟ್ಟದ ಅಥವಾ ಚೀಪ್ ವ್ಯಕ್ತಿಯಲ್ಲ. ವಿಜಯ್ ಅವರು 52ನೇ ವಯಸ್ಸಿನಲ್ಲಿ ಎಂಜಿಆರ್ ಮತ್ತು ಎನ್‌ಟಿಆರ್ ಅವರಿಗಿಂತಲೂ ದೊಡ್ಡ ಸಾಧನೆ ಮಾಡಿದ್ದಾರೆ. ಕೇಂದ್ರದಲ್ಲಿರುವ ಬಿಜೆಪಿ ಹಾಗೂ ಇಲ್ಲಿನ ಎರಡು ಪ್ರಮುಖ ದ್ರಾವಿಡ ಪಕ್ಷಗಳನ್ನು ಎದುರಿಸಿ ಅವರು ಗೆದ್ದಿದ್ದಾರೆ. ಇದು ಸಾಮಾನ್ಯ ವಿಷಯವಲ್ಲ. ಅವರ ಮೇಲೆ ನನಗೆ ಯಾವುದೇ ಅಸೂಯೆ ಇಲ್ಲ. ಬದಲಿಗೆ ದೊಡ್ಡ ನಿರೀಕ್ಷೆಗಳಿವೆ. ನನ್ನ ಬೆಸ್ಟ್ ವಿಶಸ್ ಯಾವಾಗಲೂ ವಿಜಯ್ ಜೊತೆ ಇರುತ್ತದೆ' ಎಂದು ತಲೈವಾ ಹೊಗಳಿದ್ದಾರೆ.

ತಮಿಳುನಾಡು ರಾಜಕೀಯದಲ್ಲಿ ಹೊಸ ಇತಿಹಾಸ ಸೃಷ್ಟಿಸಿ ಸಿಎಂ ಆಗಿರುವ ವಿಜಯ್ ಮತ್ತು ಸೂಪರ್‌ಸ್ಟಾರ್ ರಜನಿಕಾಂತ್ ನಡುವೆ ಎಲ್ಲವೂ ಸರಿ ಇಲ್ಲ ಎಂಬ ಊಹಾಪೋಹಗಳಿಗೆ ರಜನಿಕಾಂತ್ ಅವರ ಈ ಹೇಳಿಕೆಯು ಸಂಪೂರ್ಣ ಬ್ರೇಕ್ ಹಾಕಿದೆ. ಸುದ್ದಿಗೋಷ್ಠಿಯ ಮೂಲಕ ಅವರು ಎಲ್ಲ ಟೀಕೆಗಳಿಗೆ ಉತ್ತರ ನೀಡಿದ್ದಾರೆ.




# 6 ತಿಂಗಳಲ್ಲಿ ರಾಜಕೀಯ ಬದಲಾವಣೆ:ಟಿಟಿವಿ ದಿನಕರನ್ ಸ್ಫೋಟಕ ಹೇಳಿಕೆ

ತಮಿಳುನಾಡಿನ ರಾಜಕೀಯ ವಲಯದಲ್ಲಿ ಮತ್ತೊಂದು ಸ್ಫೋಟಕ ಬೆಳವಣಿಗೆ ನಡೆದಿದೆ. ಮುಖ್ಯಮಂತ್ರಿ ವಿಜಯ್ ನೇತೃತ್ವದ ಟಿವಿಕೆ ಸರ್ಕಾರದ ಆಯಸ್ಸು ಕೇವಲ ಆರು ತಿಂಗಳು ಮಾತ್ರ ಎಂದು ಎಎಮ್‌ಎಂಕೆ ಮುಖ್ಯಸ್ಥ ಟಿ.ಟಿ.ವಿ. ದಿನಕರನ್ ಭವಿಷ್ಯ ನುಡಿದಿದ್ದಾರೆ. ಅಲ್ಲದೆ, ತಮ್ಮ ಪಕ್ಷದ ಬಂಡಾಯ ಶಾಸಕ ಎಸ್. ಕಾಮರಾಜ್ ಅವರನ್ನು ಮಂತ್ರಿ ಮಾಡಿದರೆ, ಶಾಸಕರ ಖರೀದಿ ಆರೋಪದ ಕುರಿತು ಸಿಬಿಐ ತನಿಖೆಗೆ ಒತ್ತಾಯಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಎಎಮ್‌ಎಂಕೆ ಪಕ್ಷದಿಂದ ಗೆದ್ದು ಬಂದಿದ್ದ ಮನ್ನಾರ್ಗುಡಿ ಶಾಸಕ ಎಸ್. ಕಾಮರಾಜ್ ಇತ್ತೀಚೆಗೆ ವಿಶ್ವಾಸಮತ ಯಾಚನೆ ವೇಳೆ ಟಿವಿಕೆ ಸರ್ಕಾರಕ್ಕೆ ಬೆಂಬಲ ನೀಡಿದ್ದರು. ಈ ನಡೆ ಬಳಿಕ ಅವರನ್ನು ಪಕ್ಷದಿಂದ ವಜಾಗೊಳಿಸಲಾಗಿತ್ತು. ಆದರೆ ಇದೀಗ ಕಾಮರಾಜ್ ಅವರನ್ನು ಮಂತ್ರಿ ಮಾಡಿದರೆ, ಶಾಸಕರ ಖರೀದಿ ಹಾಗೂ ಕುದುರೆ ವ್ಯಾಪಾರದ ಆರೋಪದ ಕುರಿತು ಸಿಬಿಐ ತನಿಖೆಗೆ ಒತ್ತಾಯಿಸುವುದಾಗಿ ದಿನಕರನ್ ಎಚ್ಚರಿಕೆ ನೀಡಿದ್ದಾರೆ.

ವಿಜಯ್ ನೇತೃತ್ವದ ಟಿವಿಕೆ ಸರ್ಕಾರವು ಅಧಿಕಾರಕ್ಕೆ ಬಂದಿದ್ದರೂ, ಸ್ಪಷ್ಟ ಬಹುಮತದ ಕೊರತೆಯನ್ನು ಎದುರಿಸುತ್ತಿದೆ. ಇತ್ತೀಚಿನ ಚುನಾವಣೆಯಲ್ಲಿ ಟಿವಿಕೆ 108 ಸ್ಥಾನಗಳನ್ನು ಗೆದ್ದಿದ್ದರೂ, ಸರ್ಕಾರ ರಚಿಸಲು ಅಗತ್ಯವಿದ್ದ ಬಹುಮತಕ್ಕೆ ಇನ್ನೂ 10 ಸ್ಥಾನಗಳ ಕೊರತೆಯಿತ್ತು. ಈ ಹಿನ್ನೆಲೆ ಸಣ್ಣ ಪಕ್ಷಗಳು ಹಾಗೂ ಕೆಲವು ಬಂಡಾಯ ಶಾಸಕರ ಬೆಂಬಲದ ಮೂಲಕ ಸರ್ಕಾರ ಬಹುಮತದ ಗಡಿಯನ್ನು ದಾಟಿತ್ತು.

ಈ ವಿಚಾರವನ್ನೇ ಉಲ್ಲೇಖಿಸಿದ ದಿನಕರನ್, ಟಿವಿಕೆ ಸರ್ಕಾರ ಶಾಸಕರನ್ನು ಸೆಳೆಯಲು ಕುದುರೆ ವ್ಯಾಪಾರ ನಡೆಸಿದೆ ಎಂದು ಆರೋಪಿಸಿದ್ದಾರೆ. ನಮ್ಮ ಶಾಸಕ ಎಸ್. ಕಾಮರಾಜ್ ಅವರನ್ನು ಸೆಳೆಯಲು ಟಿವಿಕೆ ನಾಯಕರು ನಕಲಿ ಪತ್ರ ಹಾಗೂ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ಸೃಷ್ಟಿಸಿದ ವಿಡಿಯೋಗಳನ್ನು ಉಪಯೋಗಿಸಿದ್ದಾರೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ.

“ಯಾವ ರೀತಿಯ ಆಮಿಷ ಒಡ್ಡಲಾಗಿದೆ, ಯಾವ ಮಾತುಕತೆ ನಡೆದಿದೆ ಎಂಬ ಸಂಪೂರ್ಣ ಮಾಹಿತಿ ನಮ್ಮ ಬಳಿ ಇದೆ. ಇದು ರಾಜಕೀಯ ಕುದುರೆ ವ್ಯಾಪಾರವಲ್ಲದೆ ಇನ್ನೇನು?” ಎಂದು ದಿನಕರನ್ ಪ್ರಶ್ನಿಸಿದ್ದಾರೆ.

ಇದೇ ವೇಳೆ ವಿಜಯ್ ಸರ್ಕಾರದ ಸ್ಥಿರತೆ ಕುರಿತು ದಿನಕರನ್ ಅನುಮಾನ ವ್ಯಕ್ತಪಡಿಸಿದ್ದಾರೆ. ರಾಜ್ಯದ ರಾಜಕೀಯ ಪರಿಸ್ಥಿತಿ ನಿರಂತರವಾಗಿ ಬದಲಾಗುತ್ತಿರುವ ಕಾರಣ, ವಿಸಿಕೆ ಹಾಗೂ ಎಡಪಕ್ಷಗಳು ಹೆಚ್ಚು ದಿನ ಸರ್ಕಾರಕ್ಕೆ ಬೆಂಬಲ ನೀಡಲು ಸಾಧ್ಯವಿಲ್ಲ ಎಂದಿದ್ದಾರೆ. ತಲಾ ಎರಡು ಹಾಗೂ ನಾಲ್ಕು ಶಾಸಕರನ್ನು ಹೊಂದಿರುವ ಈ ಪಕ್ಷಗಳು ಆರು ತಿಂಗಳೊಳಗೆ ತಮ್ಮ ನಿಲುವು ಬದಲಾಯಿಸಬಹುದು ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

ವಿಶ್ವಾಸಮತ ಪರೀಕ್ಷೆಯಲ್ಲಿ ಜಯ ಸಾಧಿಸಿರುವ ಟಿವಿಕೆ ಸರ್ಕಾರ ಕನಿಷ್ಠ ನವೆಂಬರ್ ವರೆಗೆ ಉಳಿಯಬಹುದು. ಆದರೆ ಆ ನಂತರ ಸರ್ಕಾರದ ಭವಿಷ್ಯ ಅನುಮಾನಾಸ್ಪದವಾಗಲಿದೆ ಎಂದು ದಿನಕರನ್ ಭವಿಷ್ಯ ನುಡಿದಿದ್ದಾರೆ. ಡಿಎಂಕೆ ಪಕ್ಷವೂ ತಕ್ಷಣ ಸರ್ಕಾರ ಅಸ್ಥಿರಗೊಳಿಸಲು ಮುಂದಾಗುವುದಿಲ್ಲ, ಆದರೆ ರಾಜಕೀಯ ಬೆಳವಣಿಗೆಗಳು ಯಾವ ಕ್ಷಣದಲ್ಲಾದರೂ ಬದಲಾಗಬಹುದು ಎಂದು ಹೇಳಿದ್ದಾರೆ.



ಇನ್ನೊಂದೆಡೆ ಅಣ್ಣಾಡಿಎಂಕೆ ಪಕ್ಷದ ಒಳಬಿಕ್ಕಟ್ಟಿನ ಕುರಿತು ದಿನಕರನ್ ಮಾತನಾ ಡಿದ್ದಾರೆ. ಪಕ್ಷಾಂತರ ವಿರೋಧಿ ಕಾಯ್ದೆಯಿಂದ ಪಾರಾಗಲು ಬಂಡಾಯ ಶಾಸಕರ ಬಳಿ ಅಗತ್ಯ ಸಂಖ್ಯಾಬಲವಿಲ್ಲ ಎಂದು ಅವರು ತಿಳಿಸಿದ್ದಾರೆ.

ಪ್ರಸ್ತುತ ಅಣ್ಣಾಡಿಎಂಕೆ ಪಕ್ಷದಲ್ಲಿ 47 ಶಾಸಕರಿದ್ದು, ಸಿ.ವಿ. ಷಣ್ಮುಗಂ ಹಾಗೂ ಎಸ್.ಪಿ. ವೇಲುಮಣಿ ನೇತೃತ್ವದ ಬಂಡಾಯ ಬಣಕ್ಕೆ ಸುಮಾರು 25 ಶಾಸಕರ ಬೆಂಬಲವಿದೆ. ಆದರೆ ಅನರ್ಹತೆ ಯಿಂದ ಪಾರಾಗಲು ಕನಿಷ್ಠ 32 ಶಾಸಕರ ಬೆಂಬಲ ಅಗತ್ಯವಿದೆ ಎಂದು ದಿನಕರನ್ ಹೇಳಿದ್ದಾರೆ.

“ಅಮ್ಮ (ಜಯಲಲಿತಾ) ಅವರ ಆಡಳಿತ ವನ್ನು ಮರುಸ್ಥಾಪಿಸುವ ಹೆಸರಿನಲ್ಲಿ ಟಿವಿಕೆ ಸರ್ಕಾರವನ್ನು ಬೆಂಬಲಿಸುತ್ತಿ ರುವವರು ಮುಂದೆ ರಾಜಕೀಯ ಪರಿಣಾಮ ಗಳನ್ನು ಎದುರಿಸಬೇಕಾಗುತ್ತದೆ” ಎಂದು ದಿನಕರನ್ ಎಚ್ಚರಿಕೆ ನೀಡಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
9535786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.